ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 ಸಂಚಿಕೆ: Issue: 92 ರಾಯಚೂರು Raichur 24-09-2026 ಗುರುವಾರ Thursday ಪುಟ: Page: 04 ಬೆಲೆ: Price: ₹ 2.00 Postal Reg No.: RCR/L/RNP/95/2025-27 tungabimba@gmail.com ಸಂಪಾದಕರು : ಗುರುರಾಜ ಕೆ Editor: Gururaja K 98863 85685

IPL Acution: ಮೂರು ವರ್ಷದ ಬಳಿಕ ಮತ್ತೆ ಭಾರತದಲ್ಲೇ ಐಪಿಎಲ್ ಹರಾಜು; ಸ್ಥಳ, ದಿನಾಂಕ ಘೋಷಣೆ

# ವಿಧಾನಸಭೆ ಅಧಿವೇಶನ ಒಂದು ದಿನ ವಿಸ್ತರಣೆ

ಬೆಂಗಳೂರು: ರಾಜ್ಯದಲ್ಲಿನ ಬರಗಾಲ ಪರಿಸ್ಥಿತಿ ಹಾಗೂ ಪಶ್ಚಿಮ ಘಟ್ಟಗಳ ಸಂರಕ್ಷಣೆಗೆ ಸಂಬಂಧಿಸಿದ ಕಸ್ತೂರಿರಂಗನ್ ವರದಿ ಕುರಿತು ನಡೆಯುತ್ತಿರುವ ವಿಶೇಷ ಚರ್ಚೆಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ರಾಜ್ಯ ವಿಧಾನಸಭೆ ಅಧಿವೇಶನವನ್ನು ಒಂದು ದಿನ ವಿಸ್ತರಿಸಲಾಗಿದೆ.

ಬರಗಾಲ ಮತ್ತು ಕಸ್ತೂರಿರಂಗನ್ ವರದಿಗೆ ಸಂಬಂಧಿಸಿದಂತೆ ಮೂರು ದಿನಗಳ ಕಾಲ ನಿಗದಿಪಡಿಸಲಾಗಿದ್ದ ವಿಶೇಷ ಚರ್ಚೆ ಬುಧವಾರ ಮುಕ್ತಾಯಗೊಳ್ಳಬೇಕಿತ್ತು. ಆದರೆ, ಬರಗಾಲದ ಕುರಿತು ಸದಸ್ಯರ ಚರ್ಚೆ ಮುಂದುವರಿದ ಕಾರಣ ಸರ್ಕಾರದ ಉತ್ತರ ಸೇರಿದಂತೆ ಉಳಿದ ಕಲಾಪಗಳನ್ನು ಪೂರ್ಣಗೊಳಿಸಲು ಹೆಚ್ಚುವರಿ ಸಮಯದ ಅಗತ್ಯ ಎದುರಾಯಿತು.



ಈ ಹಿನ್ನೆಲೆಯಲ್ಲಿ ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣ ಬೈರೇಗೌಡ ಅವರು ಅಧಿವೇಶನವನ್ನು ಒಂದು ದಿನ ವಿಸ್ತರಿಸುವಂತೆ ಪೀಠಕ್ಕೆ ಮನವಿ ಮಾಡಿದರು. ಅವರ ಮನವಿಯನ್ನು ಪರಿಗಣಿಸಿದ ಉಪಸಭಾಪತಿ ಮಂಕಳ ವೈದ್ಯ ಅವರು ಅಧಿವೇಶನವನ್ನು ಗುರುವಾರದವರೆಗೆ ವಿಸ್ತರಿಸಲಾಗುವುದು ಎಂದು ಸದನದಲ್ಲಿ ಘೋಷಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ ಕೂಡ ಅಧಿವೇಶನ ವಿಸ್ತರಣೆಯ ಪ್ರಸ್ತಾವಕ್ಕೆ ಸಮ್ಮತಿ ಸೂಚಿಸಿದರು. ಆಡಳಿತ ಮತ್ತು ಪ್ರತಿಪಕ್ಷಗಳ ಸಹಮತದ ಹಿನ್ನೆಲೆಯಲ್ಲಿ ಗುರುವಾರವೂ ಸದನದ ಕಲಾಪಗಳು ಮುಂದುವರಿಯಲಿವೆ.

ರಾಜ್ಯದ ವಿವಿಧ ಭಾಗಗಳಲ್ಲಿ ಎದುರಾಗಿರುವ ಬರ ಪರಿಸ್ಥಿತಿ, ರೈತರು ಎದುರಿಸುತ್ತಿರುವ ಸಮಸ್ಯೆಗಳು, ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ಬರ ಪರಿಹಾರ ಕ್ರಮಗಳು ಸೇರಿದಂತೆ ಹಲವು ವಿಷಯಗಳು ಚರ್ಚೆಯಲ್ಲಿ ಪ್ರಸ್ತಾಪವಾಗಿವೆ. ಇದರೊಂದಿಗೆ ಪಶ್ಚಿಮ ಘಟ್ಟಗಳ ಸಂರಕ್ಷಣೆಗೆ ಸಂಬಂಧಿಸಿದ ಕಸ್ತೂರಿರಂಗನ್ ವರದಿಯ ಕುರಿತೂ ಸದಸ್ಯರು ತಮ್ಮ ಅಭಿಪ್ರಾಯಗಳನ್ನು ಮಂಡಿಸುತ್ತಿದ್ದಾರೆ.

ಬರಗಾಲದ ಕುರಿತು ಸದಸ್ಯರು ಎತ್ತಿರುವ ಪ್ರಶ್ನೆಗಳು ಹಾಗೂ ಪ್ರಸ್ತಾಪಿಸಿರುವ ವಿಷಯಗಳಿಗೆ ಸರ್ಕಾರ ಗುರುವಾರ ಸದನದಲ್ಲಿ ಉತ್ತರ ನೀಡುವ ನಿರೀಕ್ಷೆಯಿದೆ. ಹೀಗಾಗಿ ಒಂದು ದಿನದ ಅಧಿವೇಶನ ವಿಸ್ತರಣೆ ಬರಗಾಲ ಕುರಿತ ವಿಶೇಷ ಚರ್ಚೆಯನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಿದೆ.

## ಬಸವಾದಿ ಶರಣರ ಹಿಂದೂ ಸಮಾವೇಶ ಶರಣ ತತ್ವಗಳಿಗೆ ವಿರುದ್ಧ: ರುದ್ರಪ್ಪ

ರಾಯಚೂರು: ಕಲಬುರಗಿಯಲ್ಲಿ ಸೆ.27ರಂದು ನಡೆಸಲು ಉದ್ದೇಶಿಸಿರುವ ಬಸವಾದಿ ಶರಣರ ಹಿಂದೂ ಸಮಾವೇಶ ಬಸವಾದಿ ಶರಣರ ತತ್ವ ಮತ್ತು ಸಿದ್ಧಾಂತಗಳಿಗೆ ವಿರುದ್ಧವಾಗಿದೆ ಎಂದು ಜಾಗತಿಕ ಲಿಂಗಾಯತ ಮಹಾಸಭಾ ರಾಯಚೂರು ಘಟಕದ ಅಧ್ಯಕ್ಷ ರುದ್ರಪ್ಪ ಆಕ್ಷೇಪ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಾರಾಷ್ಟ್ರದಲ್ಲಿ 17ನೇ ಶತಮಾನದಲ್ಲಿ ಬದುಕಿದ್ದ ಕಾಡಸಿದ್ದೇಶ್ವರರು ಶರಣ ಮಾರ್ಗದ ಉಪಾಸಕರಾಗಿದ್ದು, ಸುಮಾರು 500 ವಚನಗಳನ್ನು ರಚಿಸುವ ಮೂಲಕ ಲಿಂಗಾಯತ ತತ್ವವನ್ನು ಪ್ರತಿಪಾದಿಸಿದ್ದರು ಎಂದು ಹೇಳಿದರು. ಆದರೆ, ಕನ್ನೇರಿ ಕಾಡಸಿದ್ದೇಶ್ವರ ಸ್ವಾಮೀಜಿಯವರ ಇತ್ತೀಚಿನ ನಿಲುವುಗಳು ಮೂಲ ಶರಣ ತತ್ವಗಳಿಗೆ ವಿರುದ್ಧವಾಗಿವೆ ಎಂದು ಅವರು ಆರೋಪಿಸಿದರು.

ಕನ್ನೇರಿ ಸ್ವಾಮೀಜಿಯವರ ಕೆಲವು ಹೇಳಿಕೆಗಳು ಮತ್ತು ನಡೆ ಕುರಿತು ಈ ಹಿಂದೆ



ನ್ಯಾಯಾಲಯಗಳಲ್ಲಿಯೂ ವಿಚಾರಣೆ ನಡೆದಿದ್ದು, ಅವರ ಮಾತು ಹಾಗೂ ವರ್ತನೆಗೆ ಸಂಬಂಧಿಸಿದಂತೆ ನ್ಯಾಯಾಲಯಗಳು ಸೂಚನೆ ನೀಡಿವೆ ಎಂದು ಬಸವರಾಜ ಹೇಳಿದರು. ಬಸವ ತತ್ವಪರ ಸಂಘಟನೆಗಳು ಸ್ವಾಮೀಜಿಯವರ ಧಾರ್ಮಿಕ ನಿಲುವುಗಳಿಗೆ ತೀವ್ರ ವಿರೋಧ ವ್ಯಕ್ತಪಡಿಸುತ್ತಿವೆ ಎಂದರು.

ಕರ್ನಾಟಕ ಸರ್ಕಾರ ಬಸವಣ್ಣನವರನ್ನು ರಾಜ್ಯದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದೆ. ಅಲ್ಲದೆ, ಲಿಂಗಾಯತರಿಗೆ ಪ್ರತ್ಯೇಕ ಧಾರ್ಮಿಕ ಅಲ್ಪಸಂಖ್ಯಾತ ಮಾನ್ಯತೆ ನೀಡುವಂತೆ ರಾಜ್ಯ ಸರ್ಕಾರವು 2018ರಲ್ಲಿ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿತ್ತು. ಈ ಹಿನ್ನೆಲೆಯಲ್ಲಿ ಬಸವಾದಿ ಶರಣರ ತತ್ವ ಮತ್ತು ಲಿಂಗಾಯತ ಧರ್ಮದ ಸ್ವತಂತ್ರ ಅಸ್ತಿತ್ವದ ಕುರಿತು ನಡೆಯುತ್ತಿರುವ ಚರ್ಚೆಗಳ ನಡುವೆ ಶರಣರ ಹೆಸರನ್ನು ಬೇರೆ ಧಾರ್ಮಿಕ ಚೌಕಟ್ಟಿಗೆ ಜೋಡಿಸುವ ಪ್ರಯತ್ನಗಳು ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟರು.

“ಯಾರಾದರೂ ಹಿಂದೂ ಸಮಾವೇಶ ನಡೆಸುವುದಕ್ಕೆ ನಮ್ಮ ವಿರೋಧವಿಲ್ಲ. ಅದೇ ರೀತಿ ಬಸವಾದಿ ಶರಣರ ಕುರಿತು ಪ್ರತ್ಯೇಕವಾಗಿ ಸಮಾವೇಶ ನಡೆಸಬಹುದು. ಆದರೆ ಶಿವಶರಣರ 2ನೇ ಪುಟಕ್ಕೆ

## 250ಕ್ಕೂ ಅಧಿಕ ಸಾರ್ವಜನಿಕ ಗಣಪತಿಗಳ ಅದ್ದೂರಿ ವಿಸರ್ಜನಾ ಮೆರವಣಿಗೆ

ರಾಯಚೂರು, ಸೆ.23: ಗೌರಿ-ಗಣೇಶ ಹಬ್ಬದ 9ನೇ ದಿನದ ಅಂಗವಾಗಿ ನಗರದಲ್ಲಿ ಪ್ರತಿಷ್ಠಾಪಿಸಲಾಗಿದ್ದ 250ಕ್ಕೂ ಅಧಿಕ ಸಾರ್ವಜನಿಕ ಗಣಪತಿ ಮೂರ್ತಿಗಳನ್ನು ಮಂಗಳವಾರ ಭಕ್ತಿಭಾವ, ಸಡಗರ ಮತ್ತು ಸಂಭ್ರಮದ ನಡುವೆ ಅದ್ದೂರಿ ಮೆರವಣಿಗೆಯೊಂದಿಗೆ ವಿಸರ್ಜಿಸಲಾಯಿತು.

ನಗರದ ವಿವಿಧ ಬಡಾವಣೆಗಳಲ್ಲಿ ಬೆಳಗ್ಗೆಯಿಂದಲೇ ಗಣೇಶ ಮೂರ್ತಿಗಳಿಗೆ ವಿಶೇಷ ಪೂಜೆ, ಮಂಗಳಾರತಿ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಸಂಜೆ ವೇಳೆಗೆ ಗಣೇಶ ಮೂರ್ತಿಗಳನ್ನು ಹೂವು, ವಿದ್ಯುತ್ ದೀಪ ಹಾಗೂ ವಿವಿಧ ಅಲಂಕಾರಗಳಿಂದ ಸಿಂಗರಿಸಿ ಮೆರವಣಿಗೆಗೆ ಸಿದ್ಧಪಡಿಸಲಾಯಿತು.

ವಿವಿಧ ಬಡಾವಣೆಗಳಿಂದ ಆರಂಭವಾದ ಗಣೇಶ ಮೂರ್ತಿಗಳ ಮೆರವಣಿಗೆಗಳು ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳ ಮೂಲಕ ಸಾಗಿದವು. ಮೆರವಣಿಗೆಯಲ್ಲಿ ಮಕ್ಕಳು, ಯುವಕರು, ಮಹಿಳೆಯರು ಸೇರಿದಂತೆ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡಿದ್ದರು. ಯುವಕರು ಹಣೆಗೆ ಕೇಸರಿ ಪಟ್ಟಿಗಳನ್ನು



ಕಟ್ಟಿಕೊಂಡು, ಕೈಯಲ್ಲಿ ಕೇಸರಿ ಧ್ವಜಗಳನ್ನು ಹಿಡಿದು ಕುಣಿದು ಸಂಭ್ರಮಿಸಿದರು. ಮೆರವಣಿಗೆ ಸಾಗಿದ ಮಾರ್ಗಗಳಲ್ಲಿ ಹಬ್ಬದ ವಾತಾವರಣ ಮನೆ ಮಾಡಿತ್ತು.

ಹಲವು ಗಣೇಶ ಮಂಡಳಿಗಳ ವತಿಯಿಂದ 9ನೇ ದಿನದ ವಿಶೇಷವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳು, ಗಣ್ಯರಿಗೆ ಸನ್ಮಾನ, ಭಕ್ತರಿಗೆ ಅನ್ನಪ್ರಸಾದ ವಿತರಣೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಕೆಲವು ಕಡೆಗಳಲ್ಲಿ ರಾತ್ರಿ ವರೆಗೂ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಮುಂದುವರಿದವು.

ನಗರದ ವಿವಿಧ ಭಾಗಗಳಿಂದ ಒಂದರ ಹಿಂದೆ ಒಂದರಂತೆ ಗಣೇಶ ಮೂರ್ತಿಗಳು ವಿಸರ್ಜನಾ ಸ್ಥಳಗಳಿಗೆ ಆಗಮಿಸುತ್ತಿದ್ದರಿಂದ ರಾತ್ರಿ ವೇಳೆಯೂ ವಿಸರ್ಜನೆ ಕಾರ್ಯ ನಿರಂತರವಾಗಿ ನಡೆಯಿತು. ಕೆಲವು ಗಣೇಶ ಮಂಡಳಿಗಳು ನಗರದಲ್ಲಿ ನಿಗದಿಪಡಿಸಿದ್ದ ವಿಸರ್ಜನಾ ಸ್ಥಳಗಳಲ್ಲಿ ಮೂರ್ತಿಗಳನ್ನು ವಿಸರ್ಜಿಸಿದರೆ, ಇನ್ನೂ ಕೆಲವು ಮಂಡಳಿಗಳು ಸಮೀಪದ ಬಾವಿಗಳಲ್ಲಿ ಮೂರ್ತಿಗಳನ್ನು ವಿಸರ್ಜಿಸಿದವು.

ಭಕ್ತರ ಹೆಚ್ಚಿನ 2ನೇ ಪುಟಕ್ಕೆ

## ರೈತರ ಬೇಡಿಕೆ ಈಡೇರಿಸದಿದ್ದರೆ ಸೆ.25ರಂದು ರಸ್ತೆ ತಡೆ: ಕೆ. ಮಸ್ತಾನ ನಾಯಕ

ರಾಯಚೂರು: ನಾರಾಯಣಪುರ ಬಲದಂಡೆ ಕಾಲುವೆಗಳಿಗೆ ನಿರಂತರ ನೀರು ಹರಿಸುವುದು ಸೇರಿದಂತೆ ರೈತರ ವಿವಿಧ ಬೇಡಿಕೆಗಳನ್ನು ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆ ಕೂಡಲೇ ಈಡೇರಿಸಬೇಕು. ಇಲ್ಲವಾದಲ್ಲಿ ಸೆ.25ರಂದು ಶಿರವಾರ ಕ್ರಾಸ್ ಬಳಿ ರಸ್ತೆ ತಡೆ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಕೃಷಿ ಅಭಿವೃದ್ಧಿ ಸೇನೆಯ ರಾಜ್ಯಾಧ್ಯಕ್ಷ ಕೆ. ಮಸ್ತಾನ ನಾಯಕ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬರಗಾಲದ ಪರಿಸ್ಥಿತಿಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಸಾಲದ ಹೊರೆಯೊಂದಿಗೆ ಜೀವನ ಸಾಗಿಸುವುದೇ ಕಷ್ಟಕರವಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ಹಿತ ಕಾಪಾಡಲು ಅಗತ್ಯ ಕ್ರಮ ಕೈಗೊಂಡು ಅವರ ನ್ಯಾಯಸಮ್ಮತ ಬೇಡಿಕೆಗಳಿಗೆ ಸ್ಪಂದಿಸಬೇಕು ಎಂದು



ಒತ್ತಾಯಿಸಿದರು.

ನಾರಾಯಣಪುರ ಬಲದಂಡೆ ಕಾಲುವೆಗಳಿಗೆ ಜಾರಿಗೊಳಿಸಿರುವ ವಾರಬಂದಿ ಪದ್ಧತಿಯನ್ನು ಕೈಬಿಟ್ಟು ಸತತವಾಗಿ ನೀರು ಹರಿಸಬೇಕು. ಇದರಿಂದ ಕಾಲುವೆಯ ಕೊನೆಯ ಭಾಗದ ರೈತರಿಗೂ ಸಮರ್ಪಕವಾಗಿ ನೀರು ತಲುಪಲು ಸಾಧ್ಯವಾಗಲಿದೆ ಎಂದು ಹೇಳಿದರು.

ಕೆಬಿಜೆಎನ್‌ಎಲ್‌ನ ಎನ್‌ಆರ್‌ಬಿಸಿ ಕಾರ್ಯಪಾಲಕ ಅಭಿಯಂತರರ ವಿಭಾಗ-6 ಕಚೇರಿಯನ್ನು ಹೊನ್ನಕುಣಿ (ದೇವದುರ್ಗ)ದಿಂದ ಸ್ಥಳಾಂತರಿಸುವ ನಿರ್ಧಾರವನ್ನು ಸರ್ಕಾರ ಕೈಬಿಡಬೇಕು. ರೈತರ ಅನುಕೂಲಕ್ಕಾಗಿ ಕಚೇರಿ ಈಗಿರುವ ಸ್ಥಳದಲ್ಲಿಯೇ ಮುಂದುವರಿಯಬೇಕು ಎಂದು ಆಗ್ರಹಿಸಿದರು.

ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ವಿದ್ಯುತ್ ಪೂರೈಕೆಯನ್ನು ಹಗಲಿನ ವೇಳೆಯಲ್ಲೇ ಕನಿಷ್ಠ 12 ಗಂಟೆಗಳ ಕಾಲ ನಿರಂತರವಾಗಿ ನೀಡುವ ಭರವಸೆಯನ್ನು ಸರ್ಕಾರ ನೀಡಬೇಕು. ಅನಿಯಮಿತ ವಿದ್ಯುತ್ ಸರಬರಾಜಿನಿಂದ ರೈತರು ನೀರಾವರಿ ಸೇರಿದಂತೆ ಹಲವು ಕೃಷಿ ಚಟುವಟಿಕೆಗಳನ್ನು ಸಮರ್ಪಕವಾಗಿ ನಡೆಸಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು.

ಟೇಲ್ಯಾಂಡ್ 2ನೇ ಪುಟಕ್ಕೆ

## ಶಿವಾನಂದ ತಗಡೂರು ಅವರಿಗೆ ರಾಜ್ಯ ನಾಟಕ ಅಕಾಡೆಮಿ ವಾರ್ಷಿಕ ಪ್ರಶಸ್ತಿ ಪ್ರದಾನ

ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ, ಹಿರಿಯ ಪತ್ರಕರ್ತ ಹಾಗೂ ರಂಗಕರ್ಮಿ ಶಿವಾನಂದ ತಗಡೂರು ಅವರಿಗೆ ಕರ್ನಾಟಕ ರಾಜ್ಯ ನಾಟಕ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಯನ್ನು ವಿಧಾನ ಪರಿಷತ್ ಉಪಸಭಾಪತಿ ಉಮಾಶ್ರೀ ಪ್ರದಾನ ಮಾಡಿ ಗೌರವಿಸಿದರು.




ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿವಾನಂದ ತಗಡೂರು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ರಂಗಭೂಮಿ ಕಲಾವಿದರು ಹಾಗೂ ರಂಗಕರ್ಮಿಗಳಿಗೆ ರಾಜ್ಯ ನಾಟಕ ಅಕಾಡೆಮಿಯ ವಾರ್ಷಿಕ ಮತ್ತು ವಿವಿಧ ದತ್ತಿನಿಧಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.

ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಉಮಾಶ್ರೀ, “ರಂಗಭೂಮಿ ಯಾವ ಕಾಲಕ್ಕೂ ತನ್ನ ಜೀವಂತಿಕೆಯನ್ನು ಕಳೆದುಕೊಳ್ಳುವುದಿಲ್ಲ. ನಾನೂ ರಂಗಭೂಮಿ ಕಲಾವಿದೆಯಾಗಿ ಬೆಳೆದು ಈ ಎತ್ತರದ ಸ್ಥಾನಕ್ಕೆ ಬಂದಿದ್ದೇನೆ. ರಂಗಭೂಮಿಯ ಮೂಲಕ ಬೆಳೆದು ಬಂದಿರುವ ಎಲ್ಲ ಕಲಾವಿದರಿಗೂ ರಾಜ್ಯ ಸರ್ಕಾರದ ಪರವಾಗಿ ಅಭಿನಂದನೆಗಳು’’ ಎಂದು ಹೇಳಿದರು.

ರಂಗಭೂಮಿ ಸಮಾಜದ ಬದುಕು, ಸಂಸ್ಕೃತಿ ಹಾಗೂ ಜನರ ಭಾವನೆಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಶಕ್ತಿಶಾಲಿ ಮಾಧ್ಯಮವಾಗಿದೆ. ಹಲವು ಪ್ರತಿಭಾವಂತರನ್ನು ಸಮಾಜಕ್ಕೆ ಪರಿಚಯಿಸುವುದರ ಜೊತೆಗೆ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಮಹತ್ವದ ಕೆಲಸವನ್ನು ರಂಗಭೂಮಿ ಮಾಡುತ್ತಿದೆ ಎಂಬ ಅಭಿಪ್ರಾಯವೂ ಸಮಾರಂಭದಲ್ಲಿ ವ್ಯಕ್ತವಾಯಿತು.

ಸಮಾರಂಭದಲ್ಲಿ ಹಿರಿಯ ನಟ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಮುಖ್ಯಮಂತ್ರಿ ಚಂದ್ರು, ರಾಜ್ಯ ನಾಟಕ ಅಕಾಡೆಮಿ ಅಧ್ಯಕ್ಷ ಡಾ. ಕೆ.ವಿ. ನಾಗರಾಜಮೂರ್ತಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಮುಕುಂದರಾಜ್, ಹಿರಿಯ ರಂಗಕರ್ಮಿ ಶ್ರೀನಿವಾಸ ಜಿ. ಕಪ್ಪಣ್ಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ. ವಸುಂಧರಾ, ರಿಜಿಸ್ಟ್ರಾರ್ ನೀಲಮ್ಮ, ಶೇಖ್ ಮಾಸ್ತರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಆಯುರ್ವೇದವು ಇಂದಿಗೂ ಪ್ರಸ್ತುತವಾಗಿದೆ: ಪವನ್ ಕಿಶೋರ್ ಪಾಟೀಲ್

ರಾಯಚೂರು ಸೆಪ್ಟಂಬರ್ 23 (ಕರ್ನಾಟಕ ವಾರ್ತೆ): ಆಯುರ್ವೇದವು ಸಹಸ್ರಾರು ವರ್ಷಗಳ ಇತಿಹಾಸ ಹೊಂದಿದ್ದರು. ಅದು ಇಂದಿಗೂ ಪ್ರಸ್ತುತವಾಗಿವೆ ಎಂದು ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್ ಎಂದು ಹೇಳಿದರು.

ಸೆಪ್ಟಂಬರ್ 23ರ ಬುಧವಾರ ದಂದು ನಗರದ ಸರಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆಯ ರಾಯಚೂರು ಇವರ ಸಹಯೋಗದೊಂದಿಗೆ ಆಯೋಜಿಸಿದ್ದ 11ನೇ ರಾಷ್ಟ್ರಿಯ ಆಯುರ್ವೇದ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಯುರ್ವೇದದಲ್ಲಿ ಉಲ್ಲೇಖವಿರುವ ವಿಷಯಗಳ ಪಾಲನೆ ಮಾಡಿದರೆ ದೀರ್ಘಾಯು, ಹಿತಾಯು ಮತ್ತು ಸುಖಾಯು



ನಮ್ಮದಾಗುತ್ತದೆ. ಆದರೆ ಇತ್ತೀಚಿನ ದಿನಗಳಲ್ಲಿ ಜನರು ವಿಷಮ ಜೀವನಶೈಲಿ, ಅನಾರೋಗ್ಯಕರ ಆಹಾರ ಸೇವನೆ, ದುಶ್ಚಟಗಳ ಹಾವಳಿ ಹಾಗೂ ಮಾನಸಿಕ ಒತ್ತಡಗಳಿಂದ ಜೀವನ ನಡೆಸುತ್ತಿದ್ದಾರೆ ಎಂದರು. ಆಯುರ್ವೇದದ ಬಗ್ಗೆ ಸ್ವತ: ತಾವು ಮತ್ತು ತಮ್ಮ ಕುಟುಂಬದ ಸದಸ್ಯರು ಉಪಯೋಗಿಸಿದ ಅನುಭವವನ್ನು ಹಂಚಿಕೊಡರು. ಆಯುರ್ವೇದದ ಬಗ್ಗೆ ಆಶಾ ಕಾರ್ಯಕರ್ತೆಯರು ಆಯುರ್ವೇದ ಔಷಧಿಗಳ ಮನೆ ಮದ್ದನ್ನು ಮತ್ತು ಆಯುರ್ವೇದದಲ್ಲಿ ತಿಳಿಸಿರುವ ಆಹಾರ ಪದ್ಧತಿಯನ್ನು ತಿಳಿಸಬೇಕೆಂದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ಆಯುಷ್ ಮತ್ತು ಅಲೋಪತಿ ನಮ್ಮ ಜಿಲ್ಲೆಯಲ್ಲಿ ಉತ್ತಮವಾಗಿ ಸಾರ್ವಜನಿಕರ ಆರೋಗ್ಯ ದೃಷ್ಟಿಯಿಂದ ಕೆಲಸ ಮಾಡುತ್ತೀವೆ. ಇದರ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದರು. 2ನೇ ಪುಟಕ್ಕೆ

## ವಿಕಸಿತ ಭಾರತ್ ಜಿಲ್ಲಾ ಸಲಹಾ ಸಮಿತಿ ಸಭೆ

### ಯುವ ಜನರಿಗೆ ಮಾಹಿತಿ ತಲುಪಿಸಲು ಪರಸ್ಪರ ಸಹಕಾರ ಅಗತ್ಯ: ಸ್ವಾತಿ ಗುಗುಲೋತ್

ರಾಯಚೂರು ಸೆಪ್ಟಂಬರ್ 23 (ಕರ್ನಾಟಕ ವಾರ್ತೆ): ವಿವಿಧ ಇಲಾಖೆಗಳ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಮಾಹಿತಿಯನ್ನು ವಿದ್ಯಾರ್ಥಿಗಳು ಮತ್ತು ಯುವಜನರಿಗೆ ತಲುಪಿಸಲು ಇಲಾಖೆಗಳ ಪರಸ್ಪರ ಸಹಕಾರ ಅಗತ್ಯವಾಗಿದೆ ಎಂದು ರಾಯಚೂರಿನ ಮೈ ಭಾರತ್ ಜಿಲ್ಲಾ ಯುವ ಅಧಿಕಾರಿ ಸ್ವಾತಿ ಗುಗುಲೋತ್ ಅವರು ಹೇಳಿದರು.

ಸೆಪ್ಟಂಬರ್ 23ರ ಬುಧವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ವಿಕಸಿತ ಭಾರತ್ ಜಿಲ್ಲಾ ಸಲಹಾ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯುವಜನ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಜಿಲ್ಲಾ ಸಲಹಾ ಸಮಿತಿಯಲ್ಲಿ ಅಧಿಕಾರಿಗಳ ಸಮನ್ವಯಕ್ಕೆ ಒತ್ತು ನೀಡಲಾಗುವುದು. ಪ್ರತಿ ಜಿಲ್ಲೆಯಲ್ಲಿ ಎರಡು ಸಮಿತಿಗಳನ್ನು ರಚಿಸಲಾಗಿದ್ದು, ಒಂದು ಜಿಲ್ಲಾ ಸಲಹಾ ಸಮಿತಿ ಹಾಗೂ ಮತ್ತೊಂದು



ಜಿಲ್ಲಾ ಸಮನ್ವಯ ಸಮಿತಿಯಾಗಿರುತ್ತದೆ. ಜಿಲ್ಲಾ ಸಮನ್ವಯ ಸಮಿತಿ ಕಾರ್ಯಕಾರಿ ಸಂಸ್ಥೆಯಾಗಿ ಪ್ರತಿ ತಿಂಗಳು ಸಭೆ ನಡೆಸಿ, ವಿವಿಧ ಕಾರ್ಯಕ್ರಮಗಳ ಅನುಷ್ಠಾನ, ಪ್ರಗತಿ ಹಾಗೂ ಕಾರ್ಯಕ್ರಮಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಕೈಗೊಳ್ಳುವ ಕುರಿತು ಪರಿಶೀಲನೆ ನಡೆಸಲಿದೆ ಎಂದರು.

ವಿಕಸಿತ ಭಾರತ ಯುವ ಶಕ್ತಿ ಕಾರ್ಯಕ್ರಮ ಪ್ರಸ್ತುತ ತ್ರೈಮಾಸಿಕದ ಪ್ರಮುಖ ಕಾರ್ಯಸೂಚಿಯಾಗಿ ವಿಕಸಿತ ಭಾರತ ಯುವ ಶಕ್ತಿ ಕಾರ್ಯಕ್ರಮವನ್ನು ಕೈಗೆತ್ತಿಕೊಳ್ಳಲಾಗಿದೆ. ಇದು ರಾಷ್ಟ್ರಿಯ ಯುವಜನೋತ್ಸವದ ಸ್ವರೂಪದ ಕಾರ್ಯಕ್ರಮವಾಗಿದ್ದು, ಜನವರಿ 10, 11 ಮತ್ತು 12ರಂದು ನವದೆಹಲಿಯಲ್ಲಿ ನಡೆಯಲಿದೆ. ಸ್ವಾಮಿ ವಿವೇಕಾನಂದರ ಜನ್ಮದಿನದ ಅಂಗವಾಗಿ ಜನವರಿ 12ರಂದು ರಾಷ್ಟಿಯ ಯುವ ದಿನವನ್ನು ಆಚರಿಸಲಾಗುತ್ತದೆ ಎಂದರು.

ಕೇದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ವತಿಯಿಂದ ಆಯೋಜಿಸಲಾಗುವ ಈ ಕಾರ್ಯಕ್ರಮದಲ್ಲಿ ದೇಶದ ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಯುವಜನರು 2ನೇ ಪುಟಕ್ಕೆ

# ಜಿಲ್ಲಾಡಳಿತದಿಂದ 29ರಂದು ವಿಶ್ವ ಪ್ರವಾಸೋದ್ಯಮ ದಿನಾಚರಣೆ

ರಾಯಚೂರು ಸೆಪ್ಟಂಬರ್ 23 (ಕರ್ನಾಟಕ ವಾರ್ತೆ): ರಾಯಚೂರಿನ ಜಿಲ್ಲಾಡಳಿತ, ರಾಯಚೂರು ಮಹಾನಗರ ಪಾಲಿಕೆ, ಪುರಾತತ್ವ ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಹಾಗೂ ಪ್ರವಾಸೋದ್ಯಮ ಇಲಾಖೆ, ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ

ವಿಶ್ವ ಪ್ರವಾಸೋದ್ಯಮ ದಿನಾಚರಣೆ-2026ರ ಕಾರ್ಯಕ್ರಮವನ್ನು ಸೆಪ್ಟಂಬರ್ 29ರ ಬೆಳಿಗ್ಗೆ 7ಕ್ಕೆ ನಗರದ ಮೆಕ್ಕಾ ದರ್ವಾಜ ಕೋಟೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಉದ್ಘಾಟನೆ ನೆರವೇರಿಸುವರು.

ಪ್ರವಾಸೋದ್ಯಮ ಇಲಾಖೆಯ ಹಾಗೂ ಇಂಧನ ಇಲಾಖೆಯ ಸಚಿವರಾದ ಕೆ.ಜೆ.ಜಾರ್ಜ್, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ಅವರು ಘನ ಉಪಸ್ಥಿತಿ ವಹಿಸುವರು.

ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎನ್.ಎಸ್.ಬೋಸರಾಜು, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎಸ್.ಎಸ್ .ನಕುಲ್, ಪ್ರವಾಸೋದ್ಯಮ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ.ರಾಮ್ ಪ್ರಸಾತ್ ಮನೋಹರ್ ವಿ., ಪ್ರವಾಸೋದ್ಯಮ ಇಲಾಖೆಯ ಆಯುಕ್ತರಾದ ಶಿವಪ್ರಸಾದ್ ಪಿ.ಆರ್., ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಬಾಗಿಯಾಗಲಿದ್ದಾರೆ ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ಜನೀರ ಅಹ್ಮದ್ ಕನವಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರ ವಿಭಾಗ 02ರಲ್ಲಿ ಸೆಪ್ಟಂಬರ್ 25ರಂದು ವಿದ್ಯುತ್ ವ್ಯತ್ಯಯ

ರಾಯಚೂರು ಸೆಪ್ಟಂಬರ್ 23 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 02ರ ಎಪಿಎಮ್‌ಸಿ 110ಕೆವಿ ವಿದ್ಯುತ್ ಉಪ ಕೇಂದ್ರದಲ್ಲಿ ಕಾಮಗಾರಿಯನ್ನು ಹಮ್ಮಿಕೊಂಡ ಪ್ರಯುಕ್ತ ಸೆಪ್ಟಂಬರ್ 25ರ ಬೆಳಿಗ್ಗೆ 6ರಿಂದ ಬೆಳಿಗ್ಗೆ 8ರವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ 6ರಿಂದ ಮಂಚಲಾಪುರರಸ್ತೆ, ಬೈಪಾಸ್ ರಸ್ತೆಯಲ್ಲಿರುವ ಇಂಡಸ್ಟ್ರಿಯಿಲ್ ಏರಿಯಾ, ಡ್ರಾಗ್ ಹೌಸ್, ರಿಮ್ಸ್ ಆಸ್ಪತ್ರೆ, ಓಪೆಕ್ ಆಸ್ಪತ್ರೆ, ಇಂಡಸ್ಟ್ರಿಯಿಲ್ ಏರಿಯಾ, ಎಲ್.ಬಿ.ಎಸ್. ನಗರ, ಪೊಲೀಸ್ ಕಾಲೋನಿ, ಅಲ್ಲಮಪ್ರಭು ಕಾಲೋನಿ, ಗಂಜ್ ಏರಿಯಾ, ಚಂದ್ರಬಡ ರಸ್ತೆ, ಹುಂಡೇಕರ್ ಕಾಲೋನಿ, ಎನ್‌ಜಿಒ ಕಾಲೋನಿ, ಆಶ್ರಯ ಕಾಲೋನಿ, ಯರಮರಸ್ ಕ್ಯಾಂಪ್, ಪೋತಗಲ್, ಅಮರಾವತಿ, ಇಂಡಸ್ಟ್ರಿಯಿಲ್ ಏರಿಯಾ ಮಂಚಲಾಪುರ ರಸ್ತೆ, ಯರಮರಸ್ ಕೈಗಾರಿಕಾ ಪ್ರದೇಶ, ನಂದಿನಿ ಹಾಲು ಡೈರಿ, ಗೆಸ್ಟ್ ಹೌಸ್, ಸರಕಾರಿ ಇಂಜಿಯಿಯರ್ ಕಾಲೇಜ್, ಎಸ್.ಎಲ್.ಎನ್. ಇಂಜಿನಿಯರಿಗ್ ಕಾಲೇಜ್ ಐ.ಐ. ಐಟಿ ಯರಮರಸ್ ಕ್ಯಾಂಪ್, ಪೋತಗಲ್, ಅಮರಾವತಿ, ಯರಮರಸ್ ದಂಡು, ಏಗನೂರು, ತುಳಸಿ ಗ್ರೀನ್, ಪಾರಸ್ ವಾಟಿಕ್ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವ್ಯತ್ಯಯ ಉಂಟಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ನಿರಂತರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 02ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

ಕೊಳೆತ ಹಣ್ಣು ತುಕ್ಕು ಹಿಡಿದ ಕಬ್ಬಿಣ ಸೊಕ್ಕು ತುಂಬಿದ ಮನುಷ್ಯ ತಾವಾಗಿಯೇ ನಾಶವಾಗುತ್ತವೆ.




# ಎನ್‌ಎಚ್-748ಎ ರೂಟ್‌ಮ್ಯಾಪ್ ಮರುಪರಿಶೀಲನೆಗೆ ಆಗ್ರಹ



ರಾಯಚೂರು, ಸೆ.23: ಎನ್‌ಎಚ್-748ಎ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಯೋಜನೆಗೆ ನಿಗದಿಪಡಿಸಿರುವ ಪ್ರಸ್ತುತ ಮಾರ್ಗವನ್ನು ಮರುಪರಿಶೀಲಿಸಿ, ಅನಗತ್ಯ ಹೆಚ್ಚುವರಿ ದೂರ ಮತ್ತು ವೆಚ್ಚವನ್ನು ಕಡಿತಗೊಳಿಸುವ ಮೂಲಕ ಸರ್ಕಾರದ ಬೊಕ್ಕಸಕ್ಕೆ ಸಂಭವಿಸಬಹುದಾದ ಕೋಟ್ಯಂತರ ರೂಪಾಯಿ ನಷ್ಟವನ್ನು ತಪ್ಪಿಸಬೇಕು ಎಂದು ಬಿಎಸ್ ಎಸ್ ಸಮಿತಿಯ ಎಚ್.ಎಂ. ಬಾಬು ಆಗ್ರಹಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯದ ಅಧಿಸೂಚನೆಯನ್ವಯ ಎನ್‌ಎಚ್-748ಎ ಹೆದ್ದಾರಿ ವಿಸ್ತರಣೆಗಾಗಿ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿದೆ. ಆದರೆ ರಾಯಚೂರು ತಾಲೂಕು ವ್ಯಾಪ್ತಿಯ ಹುಣಸ್ಯಾಳ ಹುದಾದಿಂದ ಮಮದಾಪುರ, ನೆಲಹಾಳ, ಮಿಟ್ಟಿಮಲ್ಕಾಪುರ, ಸಿದ್ರಾಂಪುರ ಹಾಗೂ ಗೌಸನಗರ ಮೂಲಕ ಹೈದರಾಬಾದ್ ರಸ್ತೆಗೆ ಸಂಪರ್ಕಿಸುವಂತೆ ರೂಪಿಸಿರುವ ಮಾರ್ಗದಿಂದ ಸುಮಾರು 18ರಿಂದ 20 ಕಿ.ಮೀ. ಹೆಚ್ಚುವರಿ ದೂರ ಕ್ರಮಿಸಬೇಕಾಗುತ್ತದೆ ಎಂದು ಹೇಳಿದರು.

ಈ ರೀತಿಯ ಉದ್ದವಾದ ಮಾರ್ಗದಿಂದ ಭೂಸ್ವಾಧೀನ, ರಸ್ತೆ ನಿರ್ಮಾಣ ಹಾಗೂ ಇತರೆ ಮೂಲಸೌಕರ್ಯ ವೆಚ್ಚಗಳು ಹೆಚ್ಚಾಗುವ ಸಾಧ್ಯತೆ ಇದೆ. ಇದರಿಂದ ಸರ್ಕಾರದ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಹುಣಸ್ಯಾಳ ಹುದಾದಿಂದ ಗೋನಾಳ, ಪತ್ತೇಪುರ, ಮಾರ್ಚೇಡ್, ಹೊಸಪೇಟೆ, ಚಿಕ್ಕಸೂಗೂರು ಹಾಗೂ ದೇವಸೂಗೂರು ಮಾರ್ಗವಾಗಿ ಹೈದರಾಬಾದ್ ರಸ್ತೆಗೆ ಸಂಪರ್ಕ ಕಲ್ಪಿಸುವ ಪರ್ಯಾಯ ಮಾರ್ಗವನ್ನು ಪರಿಶೀಲಿಸಬೇಕು. ಈ ಮಾರ್ಗವನ್ನು ಆಯ್ಕೆ ಮಾಡಿದರೆ ಹೆದ್ದಾರಿಯ ಒಟ್ಟು ದೂರ ಕಡಿಮೆಯಾಗುವುದರ ಜೊತೆಗೆ ನಿರ್ಮಾಣ ವೆಚ್ಚವೂ ತಗ್ಗಲಿದ್ದು, ಸಾರ್ವಜನಿಕರ ಸಂಚಾರಕ್ಕೂ ಹೆಚ್ಚು ಅನುಕೂಲವಾಗಲಿದೆ ಎಂದು ತಿಳಿಸಿದರು.

ಬೆಳಗಾವಿಹುನಗುಂದ ಭಾಗದಿಂದ ರಾಯಚೂರಿಗೆ ಸಂಪರ್ಕ ಕಲ್ಪಿಸುವ ಈ ಹೆದ್ದಾರಿ ಲಿಂಗಸುಗೂರು, ಸಿರವಾರ ಮತ್ತು ದೇವದುರ್ಗ ತಾಲೂಕುಗಳ ಮೂಲಕ ರಾಯಚೂರು ತಾಲೂಕಿನ ಕಲ್ಮಲಹುಣಸ್ಯಾಳವರೆಗೆ ನಿಗದಿಪಡಿಸಿರುವ ಮಾರ್ಗ ಸೂಕ್ತವಾಗಿದೆ. ಆದರೆ ಹುಣಸ್ಯಾಳದ ನಂತರದ ಮಾರ್ಗದಲ್ಲಿ ಬದಲಾವಣೆ ಮಾಡಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಅವರು ಹೇಳಿದರು.

ಸಂಬಂಧಿಸಿದ ಅಧಿಕಾರಿಗಳು ಸ್ಥಳೀಯ ಭೌಗೋಳಿಕ ಪರಿಸ್ಥಿತಿ, ಭೂಸ್ವಾಧೀನ ವೆಚ್ಚ, ಪ್ರಯಾಣದ ದೂರ ಹಾಗೂ ಸಾರ್ವಜನಿಕರಿಗೆ ಆಗುವ ಅನುಕೂಲಗಳನ್ನು ಸಮಗ್ರವಾಗಿ ಪರಿಶೀಲಿಸಿ, ತಾಂತ್ರಿಕ ಮತ್ತು ವೈಜ್ಞಾನಿಕ ಆಧಾರದ ಮೇಲೆ ರೂಟ್‌ಮ್ಯಾಪ್‌ನ್ನು ಮರುನಿಗದಿಪಡಿಸಬೇಕು ಎಂದು ಎಚ್.ಎಂ. ಬಾಬು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಚಂದ್ರಶೇಖರ ಉಪಸ್ಥಿತರಿದ್ದರು.

# ಸಂಘ-ಸಂಸ್ಥೆಗಳಲ್ಲಿ ಮೀಸಲಾತಿ ಕಲ್ಪಿಸಲು ಸರ್ಕಾರಕ್ಕೆ ಮನವಿ: ಕೆ. ಶಾಂತಪ್ಪ



ರಾಯಚೂರು, ಸೆ.22: ವಿವಿಧ ಸಂಘ-ಸಂಸ್ಥೆಗಳಲ್ಲಿ ಎಲ್ಲ ಸಮುದಾಯಗಳಿಗೂ ಸೂಕ್ತ ಪ್ರಾತಿನಿಧ್ಯ ದೊರೆಯುವಂತೆ ಮೀಸಲಾತಿ ವ್ಯವಸ್ಥೆ ಕಲ್ಪಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಕೆ. ಶಾಂತಪ್ಪ ಹೇಳಿದರು.

ನಗರದ ಅಂಬೇಡ್ಕರ್ ವೃತ್ತದ ಸಮೀಪದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಭವನದಲ್ಲಿ ಮಂಗಳವಾರ ಸವಿತಾ ಸಮಾಜ ನಿವೃತ್ತ ಸರ್ಕಾರಿ ನೌಕರರ ಪತ್ತಿನ ಸಹಕಾರ ಸಂಘ ನಿಯಮಿತ, ರಾಯಚೂರು ವತಿಯಿಂದ ಹಮ್ಮಿಕೊಂಡಿದ್ದ 7ನೇ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಅವರು ಮಾತನಾಡಿದರು.

ಸಾಮಾಜಿಕ ನ್ಯಾಯದ ಆಶಯಕ್ಕೆ ಅನುಗುಣವಾಗಿ ಅರ್ಹರಿಗೆ ಅವಕಾಶ ಕಲ್ಪಿಸುವುದು ಅಗತ್ಯವಾಗಿದೆ. ಸಂಘ-ಸಂಸ್ಥೆಗಳ ಆಡಳಿತದಲ್ಲಿ ಎಲ್ಲ ಸಮುದಾಯಗಳಿಗೂ ಸಮಾನ ಅವಕಾಶ ಹಾಗೂ ಪ್ರಾತಿನಿಧ್ಯ ದೊರೆಯುವಂತಾಗಬೇಕು. ಈ ನಿಟ್ಟಿನಲ್ಲಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ನಾಗಲದಿನ್ನಿ ಶ್ರೀನಿವಾಸ್ ಮಾತನಾಡಿ, ಸವಿತಾ ಸಮಾಜದವರಿಗೂ ವಿವಿಧ ಸಂಘ-ಸಂಸ್ಥೆಗಳಲ್ಲಿ ನಾಮನಿರ್ದೇಶನದ ಮೂಲಕ ಅವಕಾಶ ಕಲ್ಪಿಸಬೇಕು. ಸಮಾಜದವರಿಗೆ ಸೂಕ್ತ ಪ್ರಾತಿನಿಧ್ಯ ದೊರೆಯುವಂತೆ ಸರ್ಕಾರ ಹಾಗೂ ಸಂಬಂಧಪಟ್ಟ ಸಂಸ್ಥೆಗಳು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ 2025-26ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ, ಜಮಾ-ಖರ್ಚು, ಲಾಭ-ಹಾನಿ ಹಾಗೂ ಆಢಾವೆ ಪತ್ರಿಕೆಗಳನ್ನು ಪರಿಶೀಲಿಸಿ ಅನುಮೋದಿಸಲಾಯಿತು. 2026-27ನೇ ಸಾಲಿಗೆ ಲೆಕ್ಕ ಪರಿಶೋಧಕರ ನೇಮಕ, ವಾರ್ಷಿಕ ಅಂದಾಜು ಪತ್ರಿಕೆ ಅನುಮೋದನೆ ಹಾಗೂ ಸಂಘದ ಬೈಲಾದಲ್ಲಿ ಲಾಭಾಂಶ ವಿತರಣೆಗೆ ಸಂಬಂಧಿಸಿದ ತಿದ್ದುಪಡಿಗಳ ಕುರಿತು ಚರ್ಚಿಸಲಾಯಿತು.

2026ರ ಮಾರ್ಚ್ 31ರ ಅಂತ್ಯಕ್ಕೆ ಸಂಘದಲ್ಲಿದ್ದ 274 ಸದಸ್ಯತ್ವವನ್ನು ಸಭೆಯಲ್ಲಿ ಅನುಮೋದಿಸಲಾಯಿತು. ಸುಸ್ತಿ ಸಾಲಗಾರರಿಂದ ಬಾಕಿ ಸಾಲ ವಸೂಲಿ ಮಾಡಲು ಅಗತ್ಯ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆಯೂ ಚರ್ಚೆ ನಡೆಯಿತು.

ಇದೇ ವೇಳೆ ನಿವೃತ್ತರಾದ ಮಂಜುಳಾ, ನಾಗರಾಜ ಹಾಗೂ ಯಲ್ಲಪ್ಪ ಅವರನ್ನು ಸನ್ಮಾನಿಸಲಾಯಿತು. ಸಂಘದಿಂದ ಪಡೆದ ಸಾಲವನ್ನು ಸಮರ್ಪಕವಾಗಿ ಮರುಪಾವತಿಸಿದ ಸದಸ್ಯರು, ಪಿಗ್ಮಿ ಖಾತೆದಾರರು, ಮುದ್ದತ್ತು ಠೇವಣಿದಾರರು ಹಾಗೂ ಸಾಲದ ಖಾತೆದಾರರನ್ನು ಪ್ರೋತ್ಸಾಹಿಸಿ ಗೌರವಿಸಲಾಯಿತು.

ಸಂಘದ ಸಿಇಒ ಗಾಯತ್ರಿ, ಮ್ಯಾನೇಜರ್ ಇಂದಿರಾ, ಅಕೌಂಟೆಂಟ್ ಸರಸ್ವತಿ ಹಾಗೂ ಸಿಬ್ಬಂದಿ ಲಕ್ಷ್ಮೀ ಅವರನ್ನು ಕೂಡ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ದರೆಸಾಬ್ ಸಿತಾರಿ, ವೆಂಕಟಚಲಪತಿ, ನಾಗಲದಿನ್ನಿ ಶ್ರೀನಿವಾಸ್, ಚಂದ್ರಶೇಖರಪ್ಪ, ಕೆ. ಶಾಂತಪ್ಪ, ಮೊಹಮ್ಮದ್ ಸಲಾಂ ಸೇರಿದಂತೆ ಸಂಘದ ಪದಾಧಿಕಾರಿಗಳು, ನಿರ್ದೇಶಕರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ಆರಂಭದಲ್ಲಿ ಪ್ರಾರ್ಥನೆ, ಮೌನಾಚರಣೆ, ಸ್ವಾಗತ ಭಾಷಣ ಹಾಗೂ ಅಧ್ಯಕ್ಷರ ಭಾಷಣ ನಡೆಯಿತು. ಬಳಿಕ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಿ ವಂದನಾರ್ಪಣೆಯೊಂದಿಗೆ ಸಭೆ ಮುಕ್ತಾಯಗೊಂಡಿತು.

# ಬಡ ವಿದ್ಯಾರ್ಥಿಗಳಿಗೆ ಉಚಿತ ಸ್ಪರ್ಧಾತ್ಮಕ ಪುಸ್ತಕಗಳ ವಿತರಣೆ




ಲಿಂಗಸುಗೂರು: ಗ್ರಾಮೀಣ ಭಾಗದ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಆಸಕ್ತಿ ಮೂಡಿಸಿ, ಉತ್ತಮ ಸಿದ್ಧತೆಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಪಟ್ಟಣದ ವಿಶ್ವಜ್ಞಾನಿ ಸ್ಪರ್ಧಾತ್ಮಕ ತರಬೇತಿ ಕೇಂದ್ರದಲ್ಲಿ 100 ವಿದ್ಯಾರ್ಥಿಗಳಿಗೆ ಉಚಿತವಾಗಿ ಸ್ಪರ್ಧಾತ್ಮಕ ಪುಸ್ತಕಗಳನ್ನು ವಿತರಿಸಲಾಯಿತು.

ಶರಣಗೌಡ ಗುರಿಕರ್ ಅವರ ಸಹೋದರರಾದ ಬೆಂಗಳೂರಿನ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹನುಮನಗೌಡ ಪೊಲೀಸ್ ಪಾಟೀಲ್ ಅವರು ರಚಿಸಿರುವ ಪರಮ್ ಸ್ಪರ್ಧಾತ್ಮಕ ಪುಸ್ತಕವನ್ನು ಕೇಂದ್ರದಲ್ಲಿ ತರಬೇತಿ ಪಡೆಯುತ್ತಿರುವ 100 ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತವಾಗಿ ನೀಡಲಾಯಿತು.

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸೂಕ್ತ ಮಾರ್ಗದರ್ಶನ ಹಾಗೂ ಅಧ್ಯಯನ ಸಾಮಗ್ರಿಗಳ ಕೊರತೆಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಹಿಂದುಳಿಯಬಾರದು. ಅವರಿಗೆ ಅಗತ್ಯವಾದ ಪುಸ್ತಕಗಳನ್ನು ಒದಗಿಸುವ ಮೂಲಕ ಆತ್ಮವಿಶ್ವಾಸ ಹೆಚ್ಚಿಸಿ, ವಿವಿಧ ಸರ್ಕಾರಿ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರಿಣಾಮಕಾರಿಯಾಗಿ ಸಿದ್ಧರಾಗಲು ನೆರವಾಗಬೇಕು ಎಂಬ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಆಯೋಜಕರು ತಿಳಿಸಿದರು.

ವಿದ್ಯಾರ್ಥಿಗಳು ದೊರೆತ ಅವಕಾಶ ಮತ್ತು ಅಧ್ಯಯನ ಸಾಮಗ್ರಿಗಳನ್ನು ಸಮರ್ಪಕವಾಗಿ ಬಳಸಿಕೊಂಡು ನಿರಂತರ ಪರಿಶ್ರಮದೊಂದಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸಿ, ಉನ್ನತ ಹುದ್ದೆಗಳನ್ನು ಪಡೆಯುವ ಮೂಲಕ ತಮ್ಮ ಕುಟುಂಬ ಹಾಗೂ ಗ್ರಾಮಕ್ಕೆ ಕೀರ್ತಿ ತರಬೇಕು ಎಂದು ಸಲಹೆ ನೀಡಲಾಯಿತು.

ಈ ಸಂದರ್ಭದಲ್ಲಿ ಶರಣಗೌಡ ಗುರಿಕರ್, ಶಿಕ್ಷಕ ಜಮದಗ್ನಿ, ವಿಶ್ವಜ್ಞಾನಿ ಸ್ಪರ್ಧಾತ್ಮಕ ತರಬೇತಿ ಕೇಂದ್ರದ ನಿರ್ದೇಶಕ ದುರಗಪ್ಪ ಬಂಡೇಭಾವಿ, ಈಶ್ವರ್ ಗುರುಗುಂಟಾ, ಕನಕರಾಯ ಈಚನಾಳ ಸೇರಿದಂತೆ ಕೇಂದ್ರದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಬಸವಾದಿ ಶರಣರ ಹಿಂದೂ ಸಮಾವೇಶ ಶರಣ ತತ್ವಗಳಿಗೆ ವಿರುದ್ಧ: ರುದ್ರಪ್ಪ

ತತ್ವಗಳನ್ನು ವೈದಿಕ ಪರಂಪರೆ ಅಥವಾ ಹಿಂದುತ್ವದೊಂದಿಗೆ ಬಲವಂತವಾಗಿ ಜೋಡಿಸುವ ಪ್ರಯತ್ನ ಮಾಡಬಾರದು. ಅದು ಶರಣರ ಮೂಲ ತತ್ವಗಳಿಗೆ ವಿರುದ್ಧವಾದ ನಡೆ'' ಎಂದು ಬಸವರಾಜ ಹೇಳಿದರು.

ಕಲಬುರಗಿಯಲ್ಲಿ ಸೆ.27ರಂದು ನಡೆಯಲಿರುವ ಸಮಾವೇಶದ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಸೆ.25ರಂದು ಕಲಬುರಗಿಯ ಬಸವೇಶ್ವರ ವೃತ್ತದಲ್ಲಿ (ಜಗತ್ ಸರ್ಕಲ್) ಸಾರ್ವಜನಿಕ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅದಕ್ಕೂ ಮುನ್ನ ಕನ್ನಡ ಭವನದಿಂದ ಬಸವೇಶ್ವರ ವೃತ್ತದವರೆಗೆ ಪಾದಯಾತ್ರೆ ನಡೆಸಲಾಗುವುದು ಎಂದು ತಿಳಿಸಿದರು.

ಬಸವ ತತ್ವಾಭಿಮಾನಿಗಳು ಹಾಗೂ ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾದಯಾತ್ರೆ ಮತ್ತು ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಅವರು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಹರ್ವಿ ನಾಗನಗೌಡ, ವಕೀಲ ಜೆ. ಬಸವರಾಜ, ಚೆನ್ನಬಸವ, ಡಾ. ಸರ್ವಮಂಗಳ ಸಕ್ರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# 250ಕ್ಕೂ ಅಧಿಕ ಸಾರ್ವಜನಿಕ ಗಣಪತಿಗಳ ಅದ್ಧೂರಿ ವಿಸರ್ಜನಾ ಮೆರವಣಿಗೆ

ಸಂಖ್ಯೆಯ ಆಗಮನ ಹಾಗೂ ಮೂರ್ತಿಗಳ ಸಾಲು ಹೆಚ್ಚಾಗಿದ್ದರಿಂದ ಕೆಲವೆಡೆ ವಿಸರ್ಜನಾ ಪ್ರಕ್ರಿಯೆ ತಡರಾತ್ರಿವರೆಗೂ ಮುಂದುವರಿಯಿತು. ಕೆಲವು ಸ್ಥಳಗಳಲ್ಲಿ ಮರುದಿನ ಮಧ್ಯಾಹ್ನದವರೆಗೂ ವಿಸರ್ಜನೆ ಕಾರ್ಯ ನಡೆದಿರುವುದು ಕಂಡುಬಂತು.

ಬಿಗಿ ಪೊಲೀಸ್ ಬಂದೋಬಸ್ತ್: ಗಣೇಶ ವಿಸರ್ಜನೆ ಹಿನ್ನೆಲೆಯಲ್ಲಿ ನಗರದ ಪ್ರಮುಖ ರಸ್ತೆ, ವೃತ್ತ, ಜನಸಂದಣಿ ಪ್ರದೇಶ ಹಾಗೂ ವಿಸರ್ಜನಾ ಸ್ಥಳಗಳಲ್ಲಿ ಪೊಲೀಸ್ ಇಲಾಖೆ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಿತ್ತು. ಮೆರವಣಿಗೆ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಸಂಚಾರ ನಿಯಂತ್ರಣ ಹಾಗೂ ಜನಸಂದಣಿ ನಿರ್ವಹಣೆಯ ಮೇಲೂ ಪೊಲೀಸರು ವಿಶೇಷ ಗಮನ ಹರಿಸಿದ್ದರು.

ನಗರದ ವಿವಿಧ ಬಡಾವಣೆಗಳಲ್ಲಿ ಪ್ರತಿಷ್ಠಾಪಿಸಲಾಗಿದ್ದ 250ಕ್ಕೂ ಅಧಿಕ ಸಾರ್ವಜನಿಕ ಗಣಪತಿ ಮೂರ್ತಿಗಳಿಗೆ ಭಕ್ತರು ಭಾವಪೂರ್ಣವಾಗಿ ಬೀಳ್ಕೊಟ್ಟರು. ಭಕ್ತಿ, ಸಂಭ್ರಮ ಹಾಗೂ ಶಾಂತಿಯುತ ವಾತಾವರಣದಲ್ಲಿ 9ನೇ ದಿನದ ಗಣೇಶ ವಿಸರ್ಜನಾ ಕಾರ್ಯಕ್ರಮ ಸಂಪನ್ನಗೊಂಡಿತು.

# ರೈತರ ಬೇಡಿಕೆ ಈಡೇರಿಸದಿದ್ದರೆ ಸೆ.25ರಂದು ರಸ್ತೆ ತಡೆ: ಕೆ. ಮಸ್ತಾನ ನಾಯಕ

ಪ್ರದೇಶದ ಕಾಲುವೆಗಳಲ್ಲಿ ತುಂಬಿರುವ ಹೂಳನ್ನು ತೆರವುಗೊಳಿಸಿ, ಕೆಳಭಾಗದ ರೈತರ ಜಮೀನುಗಳಿಗೂ ಸಮರ್ಪಕವಾಗಿ ನೀರು ತಲುಪಿಸುವ ವ್ಯವಸ್ಥೆ ಮಾಡಬೇಕು. ಕಾಲುವೆಗಳ ಎರಡೂ ಬದಿಗಳಲ್ಲಿ ಬೆಳೆದಿರುವ ಜಂಗಲ್ ಹಾಗೂ ಗಿಡಗಂಟಿಗಳನ್ನು ತೆರವುಗೊಳಿಸಿ, ಕಾಲುವೆ ರಸ್ತೆಗಳಿಗೆ ಮರಂ ಹಾಕಿಸಿ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಈ ಎಲ್ಲಾ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಸೆ.25ರಂದು ಶಿರವಾರ ಕ್ರಾಸ್ ಬಳಿ ರಸ್ತೆ ತಡೆ ನಡೆಸಲಾಗುವುದು. ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾಧಿಕಾರಿ ಅಥವಾ ಸಹಾಯಕ ಆಯುಕ್ತರು ಆಗಮಿಸಿ ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಅಧಿಕಾರಿಗಳು ಬರುವವರೆಗೂ ಹೋರಾಟ ಮುಂದುವರಿಸಲಾಗುವುದು ಎಂದು ಮಸ್ತಾನ ನಾಯಕ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಗಮೇಶ, ಶಿವನಗೌಡ, ಈರೇಶ್, ನಾಗಪ್ಪ, ಭೀಮಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಆಯುರ್ವೇದವು ಇಂದಿಗೂ ಪ್ರಸ್ತುತವಾಗಿದೆ: ಪವನ್ ಕಿಶೋರ್ ಪಾಟೀಲ್

ಈ ವೇಳೆ ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರಗೌಡ ಅವರು ಮಾತನಾಡಿ, ಈ ವರ್ಷದ ಆಯುರ್ವೇದ ದಿನಾಚರಣೆಯ ಅಂಗವಾಗಿ ಆರೋಗ್ಯಕರ ನಾಳೆಗಳಿಗಾಗಿ ಆಯುರ್ವೇದ ಎಂಬ ಘೋಷವ್ಯಾಕದೊಂದಿಗೆ ಪಂಚಕರ್ಮ ಘಟಕದ ಡಾ.ನವೀನ್ ಹಾಗೂ ಡಾ.ತೇಜಸ್ವಿನಿ ವೈದ್ಯಾಧಿಕಾರಿಗಳಿಂದ 130 ಆಶಾ ಕಾರ್ಯಕರ್ತೆಯರಿಗೆ ಆಯುರ್ವೇದದ ಬಗ್ಗೆ ಸರಕಾರದ ಮಾರ್ಗಸೂಚಿಗಳ ಅನ್ವಯ ಉಪನ್ಯಾಸ ನೀಡಲಾಗುವುದು ಹಾಗೂ ಇಲಾಖೆಯ ಇತರೆ ಕಾರ್ಯಕ್ರಮಗಳ ಪರಿಚಯ ನೀಡಲಾಗುವುದೆಂದರು.

ಈ ವೇಳೆ ಕೆ.ಜಿ.ಎ.ಎಮ್.ಒ.ಎ ಗೌರವಾಧ್ಯಕ್ಷರಾದ ಡಾ.ಶಂಕರಗೌಡ ಎಸ್.ಪಾಟೀಲ್ ಅವರು ಮಾತನಾಡಿ, ಆಯುಷ್ ಇಲಾಖೆಯ ಪರಿಚಯ ಹಾಗೂ ಇಲಾಖೆಯಿಂದ ಹಮ್ಮಿಕೊಂಡ ಇತರೆ ಕಾರ್ಯಕ್ರಮಗಳು ಹಾಗೂ ಇಲಾಖೆಯಲ್ಲಿ ವೈದ್ಯರ ಕೊರತೆಯ ನಡುವೆಯೂ ಅತ್ಯುತ್ತಮ ಕೆಲಸ ಮಾಡುತ್ತಿದ್ದು, ಇನ್ನೂ ಮುಂದಿನ ದಿನಗಳಲ್ಲಿ ಆಯುಷ್ ಇಲಾಖೆಯಿಂದ ಆರೋಗ್ಯ ಶಿಬಿರ ಹಮ್ಮಿಕೊಳ್ಳುವ ಪ್ರಸ್ತಾವ ಇದೆ ಎಂದರು.

ಇದೇ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ.ಅಮ್ಜದ್ ಶರೀಫ್, ಡಾ.ದ್ಯಾಮಪ್ಪ ಹುಲ್ಲೂರು, ಡಾ.ವಿಮಲಾ ಪಂಚಭಾವಿ, ಡಾ.ರಾಜೇಂದ್ರ ಬೆನಕನಾಳ್, ಡಾ.ದುರಗಪ್ಪ, ಡಾ.ಪ್ರತಿಮಾ ಎಸ್.ಸಿ., ಡಾ.ಸೈಯದಾ ಶಬಾನಾ ತಾಜ್, ಡಾ.ಗೀತಾ ಬಿ.ಎನ್., ಡಾ.ಪೂಜಾ, ಡಾ.ನವೀನ್, ಡಾ.ತೇಜಸ್ವಿನಿ, ಡಾ.ಅರುಣಾ ಚಲ್ವಾ, ಡಾ.ನಾಜೀಯ ಉಸ್ಮಾನಿ, ಡಾ.ಸಾದೀಯ ಫಾತೀಮ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಇದ್ದರು.

# ವಿಕಸಿತ ಭಾರತ್ ಜಿಲ್ಲಾ ಸಲಹಾ ಸಮಿತಿ ಸಭೆ ಯುವ ಜನರಿಗೆ ಮಾಹಿತಿ ತಲುಪಿಸಲು ಪರಸ್ಪರ ಸಹಕಾರ ಅಗತ್ಯ: ಸ್ವಾತಿ ಗುಗುಲೋತ್

ಭಾಗವಹಿಸಲಿದ್ದಾರೆ. ಕೇಂದ್ರ ಸಚಿವರು ಹಾಗೂ ವಿವಿಧ ಕ್ಷೇತ್ರಗಳ ತಜ್ಞರೊಂದಿಗೆ ಯುವಜನರಿಗೆ ನೇರ ಸಂವಾದ ನಡೆಸಲು ಅವಕಾಶ ಕಲ್ಪಿಸಲಾಗುತ್ತದೆ ಎಂದರು.

ಪ್ರಾದೇಶಿಕ ಮಟ್ಟದಲ್ಲಿ ಆಯ್ಕೆಯಾಗುವ ಪ್ರಮುಖ ತಂಡಗಳಿಗೆ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರೊಂದಿಗೆ ನೇರ ಸಂವಾದ ನಡೆಸುವ ಅವಕಾಶವೂ ಇರಲಿದೆ. ಯುವಜನರು ತಮ್ಮ ಆಲೋಚನೆಗಳು, ಆಸಕ್ತಿಗಳು ಹಾಗೂ ದೇಶದ ಅಭಿವೃದ್ಧಿಗೆ ಸಂಬಧಿಸಿದ ತಮ್ಮ ವಿಚಾರಗಳನ್ನು ಮಂಡಿಸಲು ಕಾರ್ಯಕ್ರಮ ವೇದಿಕೆಯಾಗಲಿದೆ ಎಂದರು.

ಕರ್ನಾಟಕದಿದ ಜನವರಿಯಲ್ಲಿ ನವದೆಹಲಿಗೆ ತೆರಳುವ ಯುವಜನರ ತಂಡವನ್ನು ಆಯ್ಕೆ ಮಾಡಲು ವಿವಿಧ ಸ್ಪರ್ಧೆಗಳು ಹಾಗೂ ಆಯ್ಕೆ ಪ್ರಕ್ರಿಯೆಗಳನ್ನು ನಡೆಸಲಾಗುವುದು. ರಾಯಚೂರಿನಲ್ಲಿ 7 ಸಾವಿರಕ್ಕೂ ಅಧಿಕ ಯುವ ಜನರ ನೋಂದಣಿ ಆಗಿದೆ. ವಿಕಸಿತ ಭಾರತ ಯಂಗ್ ಲೀಡರ್ಸ್ ಡೈಲಾಗ್ 2027ರ ಅಂಗವಾಗಿ ಆಯೋಜಿಸಲಾಗುತ್ತಿರುವ ಈ ಕ್ವಿಜ್ ಸ್ಪರ್ಧೆಯು 10 ನಿಮಿಷಗಳ ಅವಧಿಯ 20 ಪ್ರಶ್ನೆಗಳನ್ನು ಒಳಗೊಂಡಿರಲಿದೆ. ಪ್ರಚಲಿತ ವಿದ್ಯಮಾನಗಳು ಹಾಗೂ ಸಾಮಾನ್ಯ ಜ್ಞಾನ ಆಧಾರಿತ ಈ ಕ್ವಿಜ್‌ನಲ್ಲಿ ಎಂಜಿನಿಯರಿಗ್, ವೈದ್ಯಕೀಯ, ಪದವಿ, ಪಿಯು ಸೇರಿದಂತೆ ಯಾವುದೇ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ ಎಂದರು.

ಸೆಪ್ಟೆಬರ್ 30 ಕ್ವಿಜ್ ನೋಂದಣಿಗೆ ಕೊನೆಯ ದಿನವಾಗಿದೆ. ಕ್ವಿಜ್ ಪೂರ್ಣಗೊಂಡ ನಂತರ ಪ್ರತಿ ಜಿಲ್ಲೆಯ ಅಗ್ರ ಶೇ.10ರಷ್ಟು ಸ್ಪರ್ಧಿಗಳನ್ನು ಮುಂದಿನ ಹಂತಕ್ಕೆ ಆಯ್ಕೆ ಮಾಡಲಾಗುತ್ತದೆ. ಎರಡನೇ ಹಂತದಲ್ಲಿ 500 ಪದಗಳ ಪ್ರಬಂಧ ಬರೆಯುವ ಸ್ಪರ್ಧೆ ನಡೆಯಲಿದ್ದು, ಇದನ್ನೂ ಡಿಜಿಟಲ್ ಮೂಲಕ ಆಯೋಜಿಸಲಾಗುತ್ತದೆ. ಮುಂದಿನ ಹಂತದಲ್ಲಿ ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಪೇಪರ್ ಪ್ರೆಸೆಂಟೇಶನ್ ನಡೆಯಲಿದೆ. ಅಲ್ಲಿಂದ ಆಯ್ಕೆಯಾಗುವ ಜಿಲ್ಲಾ ತಂಡವನ್ನು ನವದೆಹಲಿಗೆ ಕಳುಹಿಸಲಾಗುತ್ತದೆ. ಜನವರಿಯಲ್ಲಿ ನಡೆಯಲಿರುವ ಅಂತಿಮ ಕಾರ್ಯಕ್ರಮದ ವೇಳೆಗೆ ಎಲ್ಲಾ ಹಂತಗಳನ್ನು ಪೂರ್ಣಗೊಳಿಸಿ ತಂಡವನ್ನು ಆಯ್ಕೆ ಮಾಡುವ ಉದ್ದೇಶದಿಂದ ಸೆಪ್ಟೆಂಬರ್‌ನಲ್ಲಿಯೇ ಈ ಪ್ರಕ್ರಿಯೆ ಆರಂಭಿಸಲಾಗಿದೆ ಎಂದರು.

7 ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳು ನೋಂದಣಿ: ರಾಯಚೂರು ಜಿಲ್ಲೆಯಿಂದ ಕ್ವಿಜ್ ನೋಂದಣಿಗಾಗಿ 10,934 ಮಂದಿಯ ಗುರಿ ನಿಗದಿಪಡಿಸಲಾಗಿದ್ದು, ಇದುವರೆಗೆ 7,000ಕ್ಕೂ ಅಧಿಕ ಯುವಜನರ ನೋಂದಣಿಗಳು ಪೂರ್ಣಗೊಂಡಿವೆ. ರಾಷ್ಟಿಯ ಸೇವಾ ಯೋಜನೆ, ರಾಷ್ಟಿಯ ಕೆಡೆಟ್ ಕಾರ್ಪ್ಸ್, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳ ಸಹಕಾರದಿಂದ ನೋಂದಣಿ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದರು.

ಯುವಜನರನ್ನು ತಲುಪುವ ನಿಟ್ಟಿನಲ್ಲಿ ಕಾಲೇಜುಗಳಿಗೆ ನೇರವಾಗಿ ಭೇಟಿ ನೀಡಿ ಜಾಗೃತಿ ಮೂಡಿಸುವುದರ ಜೊತೆಗೆ ಸ್ಥಳದಲ್ಲಿಯೇ ಕ್ವಿಜ್ ನೋಂದಣಿ ಮಾಡಿಸಲಾಗುತ್ತಿದೆ. ಜಿಲ್ಲೆಯ ವಿವಿಧ ಇಲಾಖೆಗಳು ತಮ್ಮ ವ್ಯಾಪ್ತಿಯ ಯುವಜನರು ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಈ ಕುರಿತು ಮಾಹಿತಿ ನೀಡಿ, ಹೆಚ್ಚಿನ ಸಂಖ್ಯೆಯ ಯುವಜನರು ಈ ಕ್ವಿಜ್‌ನಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ್, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್, ಸಾಮಾಜಿಕ ಪಿಂಚಣಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ, ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ರವಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸೂಪಡೆಂಟ್ ಸಂತೋಷ ಸೇರಿದಂತೆ ಇತರರು ಇದ್ದರು.

# ತೆಲುಗಿನೊಂದಿಗೆ ಮಾತೃಭಾಷೆ ಕನ್ನಡವನ್ನೂ ಜೀವನದಲ್ಲಿ ಅಳವಡಿಸಿಕೊಳ್ಳಿ: ಅಶೋಕ್ ಕುಮಾರ್ ಜೈನ್

## ಗಡಿನಾಡ ಕನ್ನಡಿಗರ ಸಮಸ್ಯೆಗಳಿಗೆ ಕನ್ನಡ ಮಿತ್ರಕೂಟ ಸದಾ ಬೆನ್ನೆಲುಬು

ಕೃಷ್ಣ: ಗಡಿನಾಡಿನಲ್ಲಿ ತೆಲುಗು ಭಾಷೆಯೊಂದಿಗೆ ನಮ್ಮ ಮಾತೃಭಾಷೆಯಾದ ಕನ್ನಡವನ್ನು ಎಂದಿಗೂ ಮರೆಯದೆ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಗಡಿನಾಡ ಕನ್ನಡಿಗರು ಎದುರಿಸುತ್ತಿರುವ ಸಮಸ್ಯೆಗಳ ಪರಿಹಾರಕ್ಕೆ ಕನ್ನಡ ಮಿತ್ರಕೂಟ ಹಾಗೂ ಗಡಿನಾಡ ಕನ್ನಡ ಸಂಘ ಸದಾ ಬೆನ್ನೆಲುಬಾಗಿ ನಿಲ್ಲಲಿವೆ ಎಂದು ಕನ್ನಡ ಮಿತ್ರಕೂಟ ರಾಯಚೂರು ಅಧ್ಯಕ್ಷ ಅಶೋಕ್ ಕುಮಾರ್ ಸಿ.ಕೆ. ಜೈನ್ ಹೇಳಿದರು.

ಕನ್ನಡ ಮಿತ್ರಕೂಟ ರಾಯಚೂರು ಹಾಗೂ ಗಡಿನಾಡ ಕನ್ನಡ ಸಂಘ ಕೃಷ್ಣ ಸಹಯೋಗದಲ್ಲಿ ಜಿಲ್ಲಾ ಪರಿಷತ್ ಪ್ರೌಢಶಾಲೆ ಕೃಷ್ಣ ಆವರಣದಲ್ಲಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಗಡಿನಾಡ ಕನ್ನಡಿಗರು ಎದುರಿಸುತ್ತಿರುವ ಸಮಸ್ಯೆಗಳು ಇಂದಿನದಲ್ಲ. ಹಲವು ವರ್ಷಗಳಿಂದ ವಿವಿಧ ಸಮಸ್ಯೆಗಳ ನಡುವೆ ಅತಂತ್ರ ಸ್ಥಿತಿಯಲ್ಲಿ ಬದುಕುತ್ತಿರುವ ಕನ್ನಡಿಗರ ಸಮಸ್ಯೆಗಳಿಗೆ ಎಲ್ಲರೂ ಒಗ್ಗಟ್ಟಿನಿಂದ ಪರಿಹಾರ ಕಂಡುಕೊಳ್ಳಬೇಕು. ಸ್ಥಳೀಯ ಮಟ್ಟದಲ್ಲಿ ಪರಿಹಾರ ದೊರೆಯದಿದ್ದರೆ ರಾಜ್ಯಮಟ್ಟದಲ್ಲಿಯೂ ಹೋರಾಟ ನಡೆಸಲು ಕನ್ನಡ ಮಿತ್ರಕೂಟ ಸಿದ್ಧವಿದೆ. ಗಡಿನಾಡ ಕನ್ನಡಿಗರಿಗೆ ಅಗತ್ಯ ಸೌಲಭ್ಯಗಳನ್ನು ದೊರಕಿಸಿಕೊಡಲು ಸಂಘಟನೆ ನಿರಂತರವಾಗಿ ಶ್ರಮಿಸಲಿದೆ ಎಂದು ಭರವಸೆ ನೀಡಿದರು.

ಗಡಿನಾಡ ಕನ್ನಡ ಸಂಘ ಕೃಷ್ಣ ಉಪಾಧ್ಯಕ್ಷ ಅಮರ್ ಕುಮಾರ್ ದೀಕ್ಷಿತ್ ಮಾತನಾಡಿ, ಗಡಿನಾಡಿನ ಸಮಸ್ಯೆಗಳಿಂದ ವಿದ್ಯಾರ್ಥಿಗಳ ಮುಂದಿನ ವಿದ್ಯಾಭ್ಯಾಸಕ್ಕೂ ತೊಂದರೆಯಾಗುತ್ತಿದೆ. ಹಲವು ವರ್ಷಗಳಿಂದ ಹೋರಾಟ ನಡೆಸಿ ಬೇಸತ್ತಿರುವ ಸಂದರ್ಭದಲ್ಲಿ ಕನ್ನಡ ಮಿತ್ರಕೂಟ ನಮ್ಮ ನೆರವಿಗೆ ಬಂದಿರುವುದು ಶ್ಲಾಘನೀಯ ಎಂದರು.

ಗಡಿನಾಡ ಕನ್ನಡ ಸಂಘದ ಗೌರವಾಧ್ಯಕ್ಷ ರಾಮಲಿಂಗಪ್ಪ ಕುಣಿಸಿ ಮಾತನಾಡಿ, ದೀರ್ಘಕಾಲದ ಹೋರಾಟದ ಫಲವಾಗಿ ಬಸ್ ಸೌಲಭ್ಯ ಹಾಗೂ




ಶೇ.5ರಷ್ಟು ಮೀಸಲಾತಿ ದೊರೆತಿದ್ದು, ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ. ಆದರೆ ಕನ್ನಡ ಪಠ್ಯಪುಸ್ತಕಗಳು ಇನ್ನೂ ಸಮರ್ಪಕವಾಗಿ ಲಭ್ಯವಾಗುತ್ತಿಲ್ಲ. ಈ ಕುರಿತು ಸರ್ಕಾರಕ್ಕೆ ಪತ್ರ ಬರೆದು ಪುಸ್ತಕಗಳನ್ನು ಒದಗಿಸಲು ಕನ್ನಡ ಮಿತ್ರಕೂಟ ಪ್ರಯತ್ನಿಸಬೇಕು ಎಂದು ಮನವಿ ಮಾಡಿದರು.

ಸಲಹಾ ಸಮಿತಿ ಸದಸ್ಯ ಮಲ್ಲನಗೌಡ ಹಿಂದುಪುರ ಮಾತನಾಡಿ, ಗಡಿನಾಡ ಕನ್ನಡಿಗರು ಸುಮ್ಮನೆ ಕುಳಿತರೆ ಸಮಸ್ಯೆಗಳು ಪರಿಹಾರವಾಗುವುದಿಲ್ಲ. ಸಂಘಟಿತ ಹೋರಾಟದ ಮೂಲಕ ಬೇಡಿಕೆಗಳನ್ನು ಈಡೇರಿಸಿಕೊಳ್ಳಬೇಕಿದ್ದು, ಹೋರಾಟವನ್ನು ನಿರಂತರವಾಗಿ ಮುಂದುವರಿಸಬೇಕು ಎಂದರು.

ಕನ್ನಡ ಮಿತ್ರಕೂಟ ರಾಯಚೂರು ಸಂಸ್ಥಾಪಕ ಬಶೀರ್ ಅಹ್ಮದ್ ಹೊಸಮನಿ ಮಾತನಾಡಿ, ಗಡಿನಾಡ ಕನ್ನಡಿಗರಿಗೆ ಜಿಲ್ಲಾ ಕನ್ನಡ ಕ್ರಿಯಾ ಸಮಿತಿ ರಾಯಚೂರು ಹಾಗೂ ಕನ್ನಡ ಮಿತ್ರಕೂಟದಲ್ಲಿ ಪದಾಧಿಕಾರಿಗಳ ಸ್ಥಾನ ಕಲ್ಪಿಸಿ, ಕನ್ನಡಪರ ಹೋರಾಟ ಮತ್ತು ಸೇವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಮಾಡಿರುವುದು ಹೆಮ್ಮೆಯ ಸಂಗತಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪರಿಷತ್ ಪ್ರೌಢಶಾಲೆ ಕೃಷ್ಣ ಮುಖ್ಯಗುರು ಕಿಶೋರ್ ಕುಮಾರ್ ಮಾತನಾಡಿ, ಶಾಲೆಯ ವಿದ್ಯಾರ್ಥಿಗಳು ಪಠ್ಯಪುಸ್ತಕ ಹಾಗೂ ಕನ್ನಡ ಶಿಕ್ಷಕರ ಕೊರತೆಯಿಂದ ತೊಂದರೆ ಅನುಭವಿಸುತ್ತಿದ್ದಾರೆ. ಕನ್ನಡಪರ ಸಂಘಟನೆಗಳು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸಲು ಸಹಕಾರ ನೀಡಬೇಕು ಎಂದು ಕೋರಿದರು.

ಮಂಡಲ ಕ್ಷೇತ್ರ ಶಿಕ್ಷಣಾಧಿಕಾರಿ ನಿಜಮುದ್ದೀನ್ ಮಾತನಾಡಿ, ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಬೆಳೆಸಿಕೊಂಡು ಶೈಕ್ಷಣಿಕವಾಗಿ ಸಾಧನೆ ಮಾಡಬೇಕು. ತಂಗಡಿ ಯುಪಿಎಸ್ ಅನ್ನು ಜೆಡ್‌ಪಿಎಚ್ ಎಸ್ ಆಗಿ ಉನ್ನತೀಕರಿಸಲಾಗಿದ್ದು, ಮುಂದಿನ ಶೈಕ್ಷಣಿಕ ವರ್ಷದಲ್ಲಿ 10ನೇ ತರಗತಿವರೆಗೆ ಉನ್ನತೀಕರಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

### 11 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಕಾರ್ಯಕ್ರಮದಲ್ಲಿ 2026ನೇ ಸಾಲಿನ 10ನೇ ತರಗತಿಯಲ್ಲಿ ಕನ್ನಡ ಮಾಧ್ಯಮದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಶಾಲಿನಿ, ಗಾಯತ್ರಿ, ಕುಲಸುಂಬಿ, ನಂದಿತಾ, ಪುಟ್ಟಿ ಭಾಗ್ಯಶ್ರೀ, ಸಾಜಿದ, ಆಶಾ ಬಿ., ಜಮುನಾ, ಮಲ್ಲಿಕಾರ್ಜುನ್ ಹಾಗೂ ಲಕ್ಷ್ಮಿ ಸೇರಿದಂತೆ ಒಟ್ಟು 11 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಆರಂಭದಲ್ಲಿ ಪ್ರತಿಭಾ ಗೋನಾಳ್ ಹಾಗೂ ವೀರೇಂದ್ರ ಕುರುಡಿ ಅವರಿಂದ ಸಂಗೀತ ಗಾಯನ ಕಾರ್ಯಕ್ರಮ ನಡೆಯಿತು.

ವೇದಿಕೆಯಲ್ಲಿ ಗಡಿನಾಡ ಕನ್ನಡ ಸಂಘ ಕೃಷ್ಣ ಸಂಸ್ಥಾಪಕ ಅಧ್ಯಕ್ಷ ಗಾರಾ ನರಸಿಂಹ ಶೆಟ್ಟಿ, ಕೃಷ್ಣ ಸರಪಂಚ ಸೋಲಾಪುರ ನಾಗೇಶ್, ರೇಷ್ಮಾ ಕೃಷ್ಣ, ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷೆ ಮೀನಾಕ್ಷಿ, ಗಡಿನಾಡ ಕನ್ನಡ ಸಂಘದ ಪ್ರಧಾನ ಕಾರ್ಯದರ್ಶಿ ನಾಗಭೂಷಣ, ಕನ್ನಡ ಮಿತ್ರಕೂಟದ ಪ್ರಧಾನ ಕಾರ್ಯದರ್ಶಿ ರಾಮಣ್ಣ ಮ್ಯಾರ್ದ, ಶರಣಿಕ್ ಕುಮಾರ್ ಧೋಖಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

ನಾಗಭೂಷಣ ಸ್ವಾಗತಿಸಿದರು. ಶಿಕ್ಷಕ ಅನಿಲ್ ಕುಮಾರ್ ಕಾರ್ಯಕ್ರಮ ನಿರೂಪಿಸಿದರು. ಶಾಹಿಂ ಬೇಗಂ ವಂದಿಸಿದರು.

# ಕೆಪಿಎಂಇ ಕಾಯ್ದೆ ಉಲ್ಲಂಘನೆ: ದಂಡ ವಸೂಲಿ, ಕಾನೂನು ಕ್ರಮಕ್ಕೆ ಆಗ್ರಹ



ರಾಯಚೂರು: ಕೆಪಿಎಂಇ ಕಾಯ್ದೆಯನ್ನು ಉಲ್ಲಂಘಿಸಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಕ್ಲಿನಿಕ್‌ಗಳು, ಲ್ಯಾಬ್‌ಗಳು ಹಾಗೂ ಇಮೇಜಿಂಗ್ ಸೆಂಟರ್‌ಗಳ ವಿರುದ್ಧ ಹಿಂದಿನ ಜಿಲ್ಲಾಧಿಕಾರಿಗಳು ವಿಧಿಸಿರುವ ದಂಡವನ್ನು ಕೂಡಲೇ ವಸೂಲಿ ಮಾಡಬೇಕು. ಅಲ್ಲದೆ, ವಿದ್ಯಾರ್ಹತೆಗೆ ವಿರುದ್ಧವಾಗಿ ನಿಯಮಬಾಹಿರ ಕ್ರಾಸ್ ಪ್ರಾಕ್ಟಿಸ್ ನಡೆಸುತ್ತಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸಾಮಾಜಿಕ ಕಾರ್ಯಕರ್ತರ ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಮಲಿಂಗೇಗೌಡ ಡಿ.ಎಸ್. ಆಗ್ರಹಿಸಿದ್ದಾರೆ.

ಈ ಸಂಬಂಧ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿರುವ ಅವರು, 2025ರ ಜುಲೈನಲ್ಲಿ ಅಂದಿನ ಜಿಲ್ಲಾಧಿಕಾರಿ ನಿತೀಶ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ದೇವದುರ್ಗ, ಸಿರವಾರ, ಮಾನ್ವಿ, ಲಿಂಗಸೂಗೂರು ಹಾಗೂ ರಾಯಚೂರು ತಾಲೂಕು ವ್ಯಾಪ್ತಿಯಲ್ಲಿ ಕೆಪಿಎಂಇ ಕಾಯ್ದೆ ಉಲ್ಲಂಘಿಸಿ ಕಾರ್ಯನಿರ್ವಹಿಸುತ್ತಿದ್ದ ವಿವಿಧ ಖಾಸಗಿ ಕ್ಲಿನಿಕ್‌ಗಳು, ಲ್ಯಾಬ್‌ಗಳು ಮತ್ತು ಇಮೇಜಿಂಗ್ ಸೆಂಟರ್‌ಗಳ ಕುರಿತು ವಿಚಾರಣೆ ನಡೆಸಿ, ನಿಯಮಾನುಸಾರ ತಲಾ ₹15 ಸಾವಿರದಿಂದ ₹50 ಸಾವಿರದವರೆಗೆ ದಂಡ ವಿಧಿಸಲಾಗಿತ್ತು ಎಂದು ತಿಳಿಸಿದ್ದಾರೆ.

ವಿದ್ಯಾರ್ಹತೆಗೆ ಅನುಗುಣವಾಗಿರದ ಚಿಕಿತ್ಸೆ ನೀಡುವುದು ಹಾಗೂ ನಿಯಮಬಾಹಿರವಾಗಿ ಕ್ರಾಸ್ ಪ್ರಾಕ್ಟಿಸ್ ನಡೆಸುವುದನ್ನು ನಿಷೇಧಿಸಿ, ಕೆಪಿಎಂಇ ನೋಂದಣಿ ಪಡೆಯುವವರೆಗೆ ಅಂತಹ ಕ್ಲಿನಿಕ್‌ಗಳನ್ನು ನಡೆಸಬಾರದು ಎಂದು ಸ್ಪಷ್ಟ ಆದೇಶ ನೀಡಲಾಗಿತ್ತು. ವಿಧಿಸಲಾದ ದಂಡದ ಮೊತ್ತವನ್ನು ಡಿಡಿ ಮೂಲಕ ಕೆಪಿಎಂಇ ಖಾತೆಗೆ ಜಮೆ ಮಾಡುವಂತೆ ಹಾಗೂ ತಾಲೂಕು ಮಟ್ಟದಲ್ಲಿ ನಿರಂತರ ನಿಗಾ ವಹಿಸುವಂತೆ ತಾಲೂಕು ಆರೋಗ್ಯಾಧಿಕಾರಿಗಳಿಗೆ ಸೂಚಿಸಲಾಗಿತ್ತು ಎಂದು ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

ಆದರೆ ಆದೇಶ ಹೊರಬಂದು ಸಾಕಷ್ಟು ಸಮಯ ಕಳೆದಿದ್ದರೂ, ವಿಧಿಸಲಾದ ದಂಡದ ಸಂಪೂರ್ಣ ಮೊತ್ತ ಸರ್ಕಾರದ ಖಾತೆಗೆ ಜಮೆಯಾಗಿದೆಯೇ, ನೋಂದಣಿ ಇಲ್ಲದೆ ಅಥವಾ ನಿಯಮ ಉಲ್ಲಂಘಿಸಿ ಕಾರ್ಯನಿರ್ವಹಿಸುತ್ತಿದ್ದ ಸಂಸ್ಥೆಗಳು ತಮ್ಮ ಚಟುವಟಿಕೆ ನಿಲ್ಲಿಸಿದ್ದವೆಯೇ ಹಾಗೂ ಆದೇಶ ಪಾಲಿಸದವರ ವಿರುದ್ಧ ಎಫ್‌ಐಆರ್ ಸೇರಿದಂತೆ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ ಎಂಬ ಕುರಿತು ಜಿಲ್ಲಾಡಳಿತ ಸಾರ್ವಜನಿಕರಿಗೆ ಸ್ಪಷ್ಟ ಮಾಹಿತಿ ನೀಡಿಲ್ಲ ಎಂದು ರಾಮಲಿಂಗೇಗೌಡ ಆರೋಪಿಸಿದ್ದಾರೆ.

ಹಿಂದಿನ ಜಿಲ್ಲಾಧಿಕಾರಿಗಳ ಆದೇಶದಂತೆ ಪಟ್ಟಿ ಮಾಡಲಾದ ಎಲ್ಲ ಕ್ಲಿನಿಕ್‌ಗಳು, ಆಸ್ಪತ್ರೆಗಳು, ಲ್ಯಾಬ್‌ಗಳು ಹಾಗೂ ಇಮೇಜಿಂಗ್ ಸೆಂಟರ್‌ಗಳಿಂದ ದಂಡ ವಸೂಲಾದ ಕುರಿತು ದಾಖಲೆಗಳನ್ನು ಜಿಲ್ಲಾಡಳಿತದ ಅಧಿಕೃತ ವೆಬ್‌ಸೈಟ್‌ನಲ್ಲಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಪ್ರಕಟಿಸಬೇಕು. ಇನ್ನೂ ದಂಡ ವಸೂಲಾಗದಿದ್ದಲ್ಲಿ ಬಡ್ಡಿ ಸಹಿತ ವಸೂಲಿ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಅದೇ ರೀತಿ, ಆದೇಶ ಉಲ್ಲಂಘಿಸಿ ಅನಧಿಕೃತವಾಗಿ ಅಥವಾ ಕ್ರಾಸ್ ಪ್ರಾಕ್ಟಿಸ್ ನಡೆಸುತ್ತಿರುವ ವ್ಯಕ್ತಿಗಳು ಹಾಗೂ ಸಂಸ್ಥೆಗಳ ವಿರುದ್ಧ ಕೇವಲ ನೋಟಿಸ್ ನೀಡುವುದಕ್ಕೆ ಸೀಮಿತವಾಗದೆ, ಕೆಪಿಎಂಇ ಕಾಯ್ದೆ ಹಾಗೂ ಅನ್ವಯವಾಗುವ ಇತರ ಕಾನೂನುಗಳಡಿ ಕ್ರಮ ಕೈಗೊಳ್ಳಬೇಕು. ಆದೇಶ ಜಾರಿಯಲ್ಲಿ ಯಾವುದೇ ಅಧಿಕಾರಿಗಳ ನಿರ್ಲಕ್ಷ್ಯ ಅಥವಾ ಲೋಪ ಕಂಡುಬಂದಲ್ಲಿ ಅವರ ಜವಾಬ್ದಾರಿಯನ್ನೂ ಪರಿಶೀಲಿಸಿ ಕ್ರಮ ಜರುಗಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಕೈಗೊಂಡ ಕ್ರಮಗಳು, ವಸೂಲಾದ ದಂಡ ಹಾಗೂ ಬಾಕಿ ಇರುವ ಪ್ರಕರಣಗಳ ಸಂಪೂರ್ಣ ಮಾಹಿತಿಯನ್ನು ಪಾರದರ್ಶಕವಾಗಿ ಪ್ರಕಟಿಸುವ ಮೂಲಕ ಸಾರ್ವಜನಿಕರಿಗೆ ವಾಸ್ತವ ಸ್ಥಿತಿ ತಿಳಿಸಬೇಕು. ಇದು ಯಾವುದೇ ವ್ಯಕ್ತಿ ಅಥವಾ ಸಂಸ್ಥೆಯ ವಿರುದ್ಧದ ವೈಯಕ್ತಿಕ ದ್ವೇಷದಿಂದ ಸಲ್ಲಿಸಿರುವ ಮನವಿಯಲ್ಲ; ಸಾರ್ವಜನಿಕರ ಜೀವ ರಕ್ಷಣೆ, ಆರೋಗ್ಯ ವ್ಯವಸ್ಥೆಯ ಪಾವಿತ್ರ್ಯತೆ ಹಾಗೂ ಕಾನೂನಿನ ಸಮಾನ ಅನುಷ್ಠಾನದ ಹಿತದೃಷ್ಟಿಯಿಂದ ಈ ಬೇಡಿಕೆ ಮುಂದಿಡಲಾಗಿದೆ ಎಂದು ರಾಮಲಿಂಗೇಗೌಡ ಸ್ಪಷ್ಟಪಡಿಸಿದ್ದಾರೆ.

ಮನವಿ ಸ್ವೀಕರಿಸಿದ ದಿನಾಂಕದಿಂದ 21 ದಿನಗಳೊಳಗೆ ಕೈಗೊಂಡ ಕ್ರಮಗಳ ಕುರಿತು ದೂರುದಾರರಿಗೆ ಲಿಖಿತ ಹಿಂಬರಹ ನೀಡುವುದರ ಜೊತೆಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಬೇಕು ಎಂದು ಜಿಲ್ಲಾಧಿಕಾರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

# ಪತ್ರಕರ್ತರ ರಾಜ್ಯಮಟ್ಟದ ಸಮ್ಮೇಳನಕ್ಕೆ ಕಲಾವಿದರಿಂದ ಲೋಗೊಗಳಿಗೆ ಆಹ್ವಾನ

ರಾಯಚೂರು : ಕರ್ನಾಟಕ ಕಾರ್ಯಕರ್ತ ಪತ್ರಕರ್ತರ ಸಂಘದಿಂದ ರಾಯಚೂರಿನಲ್ಲಿ ನಡೆಯಲಿರುವ 41ನೇ ಪತ್ರಕರ್ತರ ರಾಜ್ಯಮಟ್ಟದ ಸಮ್ಮೇಳನಕ್ಕೆ ಚಿತ್ರ ಕಲಾವಿದರಿಂದ ಸೂಕ್ತ ಲೋಗೊ (ಲಾಂಛನ ) ಗಳನ್ನು ಆಹ್ವಾನಿಸಲಾಗಿದೆ. ರಾಯಚೂರು ಜಿಲ್ಲೆಯ ಇತಿಹಾಸ, ಪರಂಪರೆ, ಸಂಪ್ರದಾಯಗಳನ್ನು ಒಳಗೊಂಡ ಲೋಗೋವನ್ನು ರಚಿಸಿ ಕಳುಹಿಸಲು ಕೋರಲಾಗಿದೆ. ಚಿತ್ರ ಕಲಾವಿದರು ಲೋಗೊಗಳನ್ನು ಕೈಯಿಂದಲೇ ರಚಿಸಿರಬೇಕು. ಎ ಐ ಚಿತ್ರಗಳಿಗೆ ಅವಕಾಶವಿಲ್ಲ.

ನೀವು ಕಳಿಸುವ ಲೋಗೊಗಳು ಉತ್ತಮ ರೆಜುಲೇಷನ್ ಹೊಂದಿರಬೇಕು. ಲಾಂಛನ ಆಯ್ಕೆಯಾದಲ್ಲಿ ಆ ಕಲಾವಿದರನ್ನು ಸಮ್ಮೇಳನದಲ್ಲಿ ಪ್ರಮಾಣ ಪತ್ರ ನೀಡಿ ಸನ್ಮಾನಿಸಲಾಗುವುದು.

ಆಸಕ್ತ ಕಲಾವಿದರು ಅಕ್ಟೋಬರ್ 5ನೇ ತಾರೀಖಿನ ಒಳಗಾಗಿ ಅಧ್ಯಕ್ಷರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಜಿಲ್ಲಾ ಘಟಕ ರಾಯಚೂರು, ಪತ್ರಿಕಾ ಭವನ, ರಂಗಮಂದಿರದ ಹಿಂದುಗಡೆ, ರಾಯಚೂರು ಈ ವಿಳಾಸಕ್ಕೆ ಕಳಿಸಬೇಕು ಅಥವಾ 7892 011826, 9902921474 ಈ ಸಂಖ್ಯೆಗಳ ವಾಟ್ಸ್ ಅಪ್ ಗೆ ಕಳುಹಿಸುವಂತೆ ಸಂಘದ ಜಿಲ್ಲಾಧ್ಯಕ್ಷ ಆರ್.ಗುರುನಾಥ್, ಪ್ರಧಾನ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಹಣದ ಮಹತ್ವ ಮತ್ತು ಇಂದಿನ ಪ್ರಪಂಚ

ಹಣ ಗಳಿಸಿದರೆ ಬುದ್ಧಿವಂತ ಎನ್ನುತ್ತಾರೆ, ಹಣ ಗಳಿಸದಿದ್ದರೆ ಮೂರ್ಖ ಎನ್ನುತ್ತಾರೆ, ಹಣ ಕಳೆದುಕೊಂಡರೆ ದುಂದುಗಾರ ಎನ್ನುತ್ತಾರೆ. ಹೀಗೆ ಮಾನವನ ಮಟ್ಟವನ್ನು ಹಣದಿಂದಲೇ ಅಳೆಯುವ ಕಾಲ ಇದಾಗಿದೆ. ಇದರಿಂದ ಮಾನವನ ಜೀವನದಲ್ಲಿ ಹಣದ ಪ್ರಾಮುಖ್ಯತೆ ಎಷ್ಟಿದೆ ಎಂಬುದು ತಿಳಿಯುತ್ತದೆ. ಒಬ್ಬ ವ್ಯಕ್ತಿಯಲ್ಲಿ ಹಣ ಇಲ್ಲದಿರುವಾಗ ಇರುವ ಪ್ರೀತಿ, ಸಹನೆ, ನೀತಿ, ಸತ್ಯ, ನೆಮ್ಮದಿ ಮತ್ತು ಸಮಾಧಾನಗಳು ಹಣ ಬಂದಾಗ ಇರುವುದಿಲ್ಲ ಎಂಬ ಮಾತು ಕೆಲವೊಮ್ಮೆ ನಿಜವೆನಿಸುತ್ತದೆ. ಅದಕ್ಕಾಗಿಯೇ ಹಣ ಮಾತನಾಡಿದಾಗ ಸತ್ಯ ಮೂಕವಾಗುತ್ತದೆ ಎಂಬ ಮಾತು ವಾಡಿಕೆಯಾಗಿದೆ.

ಹಣ ಗಳಿಸಿದರೆ ಮಾತ್ರ ಜನ ಮೆಚ್ಚುತ್ತಾರೆ, ಕಾಸಿದ್ದರೆ ಕೈಲಾಸ ಎಂಬ ಭಾವನೆಯೂ ಸಮಾಜದಲ್ಲಿ ಬೇರೂರಿದೆ. ನಮ್ಮಲ್ಲಿ ಹಣ ಇದ್ದರೆ ಪ್ರಪಂಚದಲ್ಲಿನ ಎಲ್ಲಾ ಸುಖಭೋಗಗಳನ್ನು ಅನುಭವಿಸಬಹುದು, ಅನೇಕ ಕಷ್ಟಗಳನ್ನು ಪರಿಹರಿಸಿಕೊಳ್ಳಬಹುದು ಮತ್ತು ಹಣ ಗಳಿಸಿದರೆ ಮಾತ್ರ ಜೀವನ ಸಾರ್ಥಕ ಎಂಬ ಮನೋಭಾವದಿಂದ ಮಾನವ ಹಣ ಗಳಿಸುವುದನ್ನೇ ತನ್ನ ಗುರಿಯನ್ನಾಗಿಸಿಕೊಳ್ಳುತ್ತಾನೆ. ಈ ಹಂಬಲದಲ್ಲಿ ಕೆಲವೊಮ್ಮೆ ತನ್ನ ಅಂತರಾತ್ಮವನ್ನೇ ಮರೆತುಬಿಡುತ್ತಾನೆ. ಜನ ಮೆಚ್ಚುವ ಬದುಕು ನಡೆಸಬೇಕೆಂದು ಹಲವರು ಹಣ ಗಳಿಸಲು ನಾನಾ ಮಾರ್ಗಗಳನ್ನು ಅನುಸರಿಸುತ್ತಾರೆ. ಆದರೆ ಜನರ ಮೆಚ್ಚುಗೆ ಶಾಶ್ವತವಲ್ಲ. ಇಂದು ನಮ್ಮನ್ನು ಪ್ರಶಂಸಿಸುವವರು ನಾಳೆ ಟೀಕಿಸಬಹುದು. ಆದ್ದರಿಂದ ಜನ ಮೆಚ್ಚುವ ಬದುಕಿಗಿಂತ ಮನ ಮೆಚ್ಚುವ ಜೀವನ ನಡೆಸುವುದು ಮುಖ್ಯ.

ತಪ್ಪು ಮಾರ್ಗದಿಂದ ಗಳಿಸಿದ ಹಣವನ್ನು ದೇವರ ಹುಂಡಿಗೆ ಹಾಕಿ ನನ್ನನ್ನು ಕ್ಷಮಿಸು ದೇವರೇ ಎಂದರೆ ಯಾವ ದೇವರು ಕ್ಷಮಿಸುವದಿಲ್ಲ. ಹಣವಿರುವವರು ದೊಡ್ಡ ತಪ್ಪುಗಳನ್ನೂ ಮುಚ್ಚಿಹಾಕಬಹುದು, ಹಣವಿಲ್ಲದವರ ಚಿಕ್ಕ ತಪ್ಪುಗಳನ್ನೇ ಸಮಾಜ ದೊಡ್ಡ ಅಪರಾಧವಾಗಿ ಕಾಣಬಹುದು ಎಂಬ ಭಾವನೆ ವಾಸ್ತವ ಜೀವನದಲ್ಲಿ ಕಾಣಿಸಬಹುದು. ಆದರೆ ಭಗವಂತನ ಲೆಕ್ಕದಲ್ಲಿ ಎಲ್ಲರ ತಪ್ಪುಗಳು ಒಂದೆ. ರೋಗಕ್ಕೆ ತಕ್ಕ ಔಷಧಿಯಂತೆ, ತಪ್ಪಿಗೆ ತಕ್ಕ ಶಿಕ್ಷೆ ಅನುಭವಿಸಲೇಬೇಕು. ಕರ್ಮ ಮರಳಿ ಬರುತ್ತದೆ ಎಂಬ ಮಾತಿನಂತೆ ನಮ್ಮ ಕಾರ್ಯಗಳ ಫಲ ನಮ್ಮನ್ನೇ ಹಿಂಬಾಲಿಸುತ್ತದೆ. ನಮ್ಮ ಅದೃಷ್ಟಕ್ಕೆ ತಕ್ಕ ಸುಖವನ್ನು ಕೊಡುವವನು ಭಗವಂತನೇ ಹೊರತು ಹಣವಲ್ಲ. ಜನರು ನಮ್ಮ ಹಣವನ್ನು ನೋಡಿ ಮೆಚ್ಚಬಹುದು, ಆದರೆ ಪರಮಾತ್ಮ ನಮ್ಮ ಗುಣವನ್ನು ನೋಡಿ ಮೆಚ್ಚುತ್ತಾನೆ ಎಂಬ ಅರಿವು ಜೀವನದ ಕೊನೆಯಲ್ಲಿ ಬರುವುದಕ್ಕಿಂತ ಮೊದಲೇ ಬಂದರೆ ಬದುಕು ಸಾರ್ಥಕವಾಗುತ್ತದೆ.

ಇನ್ನು ಕೆಲವರು ತಮ್ಮಲ್ಲಿ ಸಾಕಷ್ಟು ಹಣ ಇದ್ದರೂ ಹಣದ ಮೇಲಿನ ವ್ಯಾಮೋಹದಿಂದ ಅದನ್ನು ಖರ್ಚು ಮಾಡಲು ಹೆದರುತ್ತಾರೆ. ಹಣ ಖಾಲಿಯಾಗುತ್ತದೆ ಎಂಬ ಭಯದಿಂದ ತಮ್ಮ ಅಗತ್ಯಗಳಿಗೂ ಕಡಿವಾಣ ಹಾಕಿಕೊಳ್ಳುತ್ತಾರೆ. ಸಂಬಂಧಗಳಲ್ಲಿ ಜಗಳವಾಡಿಕೊಂಡು, ಜಿಪುಣತನದಿಂದ ತಮ್ಮ ವ್ಯಕ್ತಿತ್ವವನ್ನೇ ಕಳೆದುಕೊಳ್ಳುತ್ತಾರೆ. ಉಳಿಸಿದ ಹಣವನ್ನು ಯಾವ ಉದ್ದೇಶಕ್ಕೆ ಬಳಸಬೇಕು ಎಂಬುದೇ ಹಲವರಿಗೆ ತಿಳಿದಿರುವುದಿಲ್ಲ. ಮನೆ, ಹೊಲ, ಕಾರು, ಬೆಳ್ಳಿ, ಬಂಗಾರ ಖರೀದಿಸಲು ಹಣ ಖರ್ಚು ಮಾಡುವವರು ಬಡ ಮಕ್ಕಳ ವಿದ್ಯಾಭ್ಯಾಸ, ಅನ್ನ, ವಸ್ತ್ರ ಅಥವಾ ಸಂಕಷ್ಟದಲ್ಲಿರುವವರ ನೆರವಿಗೆ ಹಣ ಬಳಸುವುದೂ ತಮ್ಮ ಸಾಮಾಜಿಕ ಹೊಣೆ ಎಂಬುದನ್ನು ಮರೆತುಬಿಡುತ್ತಾರೆ. ಬೇರೆಯವರಿಗೆ ಕೊಟ್ಟರೆ ನಮಗೇನು ಲಾಭ? ಎಂಬ ಪ್ರಶ್ನೆಯೇ ಮೊದಲಾಗಿ ಮನಸ್ಸಿಗೆ ಬರುತ್ತದೆ.

ಹಣವೇ ಬದುಕಿನ ಮೌಲ್ಯವಾಗಿ ಪರಿಣಮಿಸಿದಾಗ ಅನೇಕ ಅನರ್ಥಗಳಿಗೆ ಕಾರಣವಾಗುತ್ತದೆ. ಧನವೇ ಜೀವನ ಎಂಬ ಭಾವನೆಯು




ಕೊನೆಯಲ್ಲಿ ಏನು ತರುತ್ತದೆ ಎಂಬುದಕ್ಕೆ ಮಹಾಭಾರತದಲ್ಲಿನ ಸುಯೋಧನನ ಬದುಕು ಒಂದು ಉದಾಹರಣೆಯಾಗಿದೆ. ಧನಕೇಂದ್ರಿತ ಬದುಕಿನ ಕುರಿತು ನಮ್ಮ ಜನಪದ ಸಾಹಿತ್ಯದಲ್ಲಿಯೂ ಎಚ್ಚರಿಕೆಯ ಮಾತುಗಳಿವೆ. ತಾನು ಉಣ್ಣದ, ಪರರಿಗಿಕ್ಕದ ಧನವಿದ್ದೇತಕೆ; ಜ್ಞಾನಹೀನನಾಗಿ ಬಾಳಿದ ಮನುಜನೇತಕೆ ಎಂಬ ಸಾಲುಗಳು ಹಣದ ಸರಿಯಾದ ಬಳಕೆಯ ಮಹತ್ವವನ್ನು ಚೆನ್ನಾಗಿ ಸಾರುತ್ತವೆ.

ಹಣವನ್ನು ಒಂದು ನದಿಗೆ ಹೋಲಿಸಬಹುದು. ಅಣೆಕಟ್ಟು ಕಟ್ಟದಿದ್ದರೆ ನೀರು ಹರಿದು ಹೋಗುತ್ತದೆ. ಆದರೆ ಅಣೆಕಟ್ಟು ಕಟ್ಟಿದ ನೀರನ್ನು ಹಾಗೆಯೇ ಕೂಡಿಟ್ಟರೆ ಪ್ರಯೋಜನವಿಲ್ಲ. ಅದನ್ನು ಬೆಳೆಗಳಿಗೆ ಹರಿಸಿ ಫಲ ಪಡೆಯುವಂತೆ, ಹಣವನ್ನು ಕೂಡಿರಟ್ಟಷ್ಟೇ ಸಾಲದು; ಅದನ್ನು ಸತ್ಕಾರ್ಯಗಳಿಗೆ ಬಳಸಬೇಕು. ಇಲ್ಲದಿದ್ದರೆ ಪಾಪಿಯ ಹಣ ಪ್ರಾಯಶ್ಚಿತ್ತಕ್ಕಲ್ಲದೆ ಸತ್ಪಾತ್ರಕ್ಕೆ ಸಲ್ಲದಯ್ಯ ಎಂಬಂತಾಗುತ್ತದೆ. ಹಣದ ಬೆನ್ನು ಹತ್ತುತ್ತಾ ಹೋದರೆ ಮನುಷ್ಯತ್ವವನ್ನೇ ಮರೆತು ಸ್ವಾರ್ಥಿಯಾಗುವ ಅಪಾಯವಿದೆ. ನಿಜವಾದ ಶ್ರೀಮಂತಿಕೆ ಕೇವಲ ಹಣದಿಂದ ಬರುವುದಿಲ್ಲ; ಬುದ್ಧಿವಂತಿಕೆ, ಜ್ಞಾನ, ಉದಾರತೆ ಮತ್ತು ಹೃದಯದ ಶ್ರೀಮಂತಿಕೆಯಿಂದ ಬರುತ್ತದೆ.

ಕೇವಲ ದೈಹಿಕ ಶ್ರಮದಿಂದಲೇ ಯಾರು ಶ್ರೀಮಂತರಾಗಲು ಸಾಧ್ಯವಿಲ್ಲ. ದೈಹಿಕ ಶ್ರಮದ ಜೊತೆಗೆ ಜ್ಞಾನ, ಕೌಶಲ್ಯ ಮತ್ತು ಚಿಂತನೆಯೂ ಅಗತ್ಯ. ಒಬ್ಬ ಕಾರ್ಮಿಕ ಬೆಳಿಗ್ಗೆಯಿಂದ ಸಂಜೆಯವರೆಗೆ ದುಡಿದರೂ ಕುಟುಂಬದ ಅಗತ್ಯಗಳನ್ನು ಪೂರೈಸಲು ಕಷ್ಟಪಡುವ ಪರಿಸ್ಥಿತಿ ಇರಬಹುದು. ಮತ್ತೊಂದೆಡೆ ಒಬ್ಬ ಉದ್ಯಮಿ ತನ್ನ ಜ್ಞಾನ, ಯೋಜನೆ ಮತ್ತು ನಿರ್ಧಾರ ಸಾಮರ್ಥ್ಯದ ಮೂಲಕ ಹೆಚ್ಚಿನ ಕಡಿಮೆ ಸಮಯದಲ್ಲಿನ ಆದಾಯ ಗಳಿಸಬಹುದು. ಆದ್ದರಿಂದಲೇ ಇಂದಿನ ಕಾಲದಲ್ಲಿ ಜ್ಞಾನಾರ್ಜನೆ ಮತ್ತು ಬುದ್ಧಿವಂತಿಕೆಯಿಂದ ಮಾಡುವ ಕೆಲಸಗಳಿಗೆ ಹೆಚ್ಚಿನ ಮೌಲ್ಯ ದೊರೆಯುತ್ತದೆ. ತಂದೆ-ತಾಯಿಗಳು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಲು ಕಷ್ಟಪಟ್ಟಾದರೂ ಹಣ ಖರ್ಚು ಮಾಡುವುದರ ಹಿಂದೆಯೂ ಇದೇ ಆಶಯವಿದೆ.

ಹಣ ಬುದ್ಧಿವಂತರಿಗೆ ಸೇವಕ, ದಡ್ಡರಿಗೆ ಯಜಮಾನ ಎಂಬ ಮಾತಿನಂತೆ, ಹಣವನ್ನು ಹಿತವಾಗಿ ಮತ್ತು ಮಿತವಾಗಿ ಬಳಸಲು ಕಲಿತವರು ಯಶಸ್ಸಿನತ್ತ ಸಾಗುತ್ತಾರೆ. ಹಣ ಗಳಿಸುವುದು ತಪ್ಪಲ್ಲ; ಆದರೆ ಹಣಕ್ಕಾಗಿ ನ್ಯಾಯ, ನಿಷ್ಠೆ, ಸತ್ಯ ಮತ್ತು ಧರ್ಮವನ್ನು ಬಿಟ್ಟುಕೊಡುವುದು ತಪ್ಪು. ಬದುಕಿಗಾಗಿ ಹಣ ಬೇಕೇ ಹೊರತು, ಹಣಕ್ಕಾಗಿ ಬದುಕು ಅಲ್ಲ ಎಂಬುದನ್ನು ಸದಾ ನೆನಪಿನಲ್ಲಿ ಇಡಬೇಕು. ಹಣ ಯಾರಾದರೂ ಗಳಿಸಬಹುದು, ಆದರೆ ಹಣಕ್ಕಾಗಿ ವ್ಯಕ್ತಿತ್ವ ಕಳೆದುಕೊಳ್ಳಬಾರದು ಎಂಬುದೇ ಈ ಲೇಖನದ ಮುಖ್ಯ ಸಂದೇಶ.

**- ಎಂ. ಸುನಿತಾ ಪುಂಡಿ**
ಗ್ರಂಥಪಾಲಕಿ, ರಾಯಚೂರು

## ಕಾರ್ಮಿಕರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಿ: ವಿಜಯಕುಮಾರ್ ಬಿ.ಎಚ್



ಹಟ್ಟಿ ಚಿನ್ನದ ಗಣಿ: ಗಣಿ ಕಂಪನಿಯ ಆಡಳಿತ ಮಂಡಳಿಯು ಕಾರ್ಮಿಕರ ನ್ಯಾಯಯುತ ಬೇಡಿಕೆಗಳನ್ನು ಕೂಡಲೇ ಈಡೇರಿಸಿ, ಕಾರ್ಮಿಕರ ಹಿತಾಸಕ್ತಿಗೆ ಪೂರಕವಾದ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮಾದಿಗ ಜಾಗೃತಿ ಯುವ ಸೇನೆಯ ಅಧ್ಯಕ್ಷ ವಿಜಯಕುಮಾರ್ ಬಿ.ಎಚ್. ಆಗ್ರಹಿಸಿದರು.

ಸಿಐಟಿಯು ನೇತೃತ್ವದ ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಮತ್ತು ಕಾರ್ಮಿಕ ಸಂಘದ ವತಿಯಿಂದ ಕ್ಯಾಂಪ್ ಪ್ರದೇಶದಲ್ಲಿ ಹಮ್ಮಿಕೊಂಡಿರುವ ಸರದಿ ಉಪವಾಸ ಸತ್ಯಾಗ್ರಹದ ಮೂರನೇ ದಿನದ ಹೋರಾಟದಲ್ಲಿ ಪಾಲ್ಗೊಂಡು ಬೆಂಬಲ ಸೂಚಿಸಿ ಅವರು ಮಾತನಾಡಿದರು.

ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡುವ ಸಂದರ್ಭದಲ್ಲಿ ಕಾರ್ಮಿಕರ ಮಕ್ಕಳ ವಿದ್ಯಾರ್ಹತೆಯನ್ನು ಪರಿಗಣಿಸದೆ ನೇಮಕ ಮಾಡಲಾಗುತ್ತಿದೆ ಎಂದು ಆರೋಪಿಸಿದ ಅವರು, ಕಾರ್ಮಿಕರು ತಮ್ಮ ಮಕ್ಕಳು ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳಲ್ಲಿ ಕೆಲಸ ಮಾಡಬೇಕೆಂಬ ಆಶಯದಿಂದ ಶಿಕ್ಷಣ ಕೊಡಿಸುತ್ತಾರೆ. ಆದರೆ ಕಾರ್ಮಿಕ ಮೃತಪಟ್ಟ ನಂತರ ಅವರ ಮಕ್ಕಳ ವಿದ್ಯಾರ್ಹತೆಯನ್ನು ಪರಿಗಣಿಸದೆ ಮತ್ತೆ ಸಾಮಾನ್ಯ ಕಾರ್ಮಿಕ ಹುದ್ದೆಗಳಿಗೆ ನೇಮಿಸುವುದು ಸರಿಯಲ್ಲ ಎಂದು ಹೇಳಿದರು.

ಅನುಕಂಪದ ನೇಮಕಾತಿಯಲ್ಲಿ ಅಭ್ಯರ್ಥಿಯ ವಿದ್ಯಾರ್ಹತೆಗೆ ಅನುಗುಣವಾದ ಹುದ್ದೆ ನೀಡುವ ವ್ಯವಸ್ಥೆಯನ್ನು ಜಾರಿಗೊಳಿಸಬೇಕು. ಸರ್ಕಾರದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಅರ್ಹತೆಯ ಆಧಾರದ ಮೇಲೆ ಹುದ್ದೆ ನೀಡುವಂತೆ ಕಂಪನಿ ಆಡಳಿತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಗಣಿ ಕಾರ್ಮಿಕರು ಕೆಲಸದ ಸ್ಥಳದ ಹೊರಗೆ ಅಪಘಾತಕ್ಕೊಳಗಾದ ಸಂದರ್ಭದಲ್ಲಿಯೂ ಅವರಿಗೆ ಗುಣಮಟ್ಟದ ವೈದ್ಯಕೀಯ ಚಿಕಿತ್ಸೆ ದೊರೆಯುವಂತೆ ಕಂಪನಿ ವ್ಯವಸ್ಥೆ ಮಾಡಬೇಕು. ಪ್ರಸ್ತುತ ಇಂತಹ ಸಂದರ್ಭಗಳಲ್ಲಿ ಕಾರ್ಮಿಕರು ಸ್ವಂತ ಖರ್ಚಿನಲ್ಲಿ ಚಿಕಿತ್ಸೆ ಪಡೆಯಬೇಕಾದ ಪರಿಸ್ಥಿತಿ ಎದುರಾಗುತ್ತಿದೆ. ಆದ್ದರಿಂದ ಅಗತ್ಯವಿದ್ದಾಗ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ರೆಫರ್ ಮಾಡುವ ವ್ಯವಸ್ಥೆಯನ್ನು ಕೂಡಲೇ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಕಾರ್ಮಿಕರ ಅವಲಂಬಿತರಿಗೆ ಇರುವ ಎರಡು ರೆಫರ್ ಮಿತಿಯನ್ನು ರದ್ದುಗೊಳಿಸಿ, ಜೀವಿತಾವಧಿಯವರೆಗೆ ಅಗತ್ಯ ವೈದ್ಯಕೀಯ ರೆಫರಲ್ ಸೌಲಭ್ಯ ಒದಗಿಸಬೇಕು. ಅಲ್ಲದೆ, ಗಣಿ ಕಂಪನಿಯಲ್ಲಿ ಹಲವು ವರ್ಷಗಳಿಂದ ಪದವಿ ಹಾಗೂ ಸ್ನಾತಕೋತ್ತರ ಪದವಿ ಪಡೆದ ಕಾರ್ಮಿಕರು ಸಾಮಾನ್ಯ ಹುದ್ದೆಗಳಲ್ಲಿಯೇ ಕಾರ್ಯನಿರ್ವಹಿಸುತ್ತಿದ್ದು, ಸಂವಿಧಾನಬದ್ಧ ರೋಸ್ಟರ್ ಪದ್ಧತಿ ಹಾಗೂ ವಿದ್ಯಾರ್ಹತೆಯನ್ನು ಪರಿಗಣಿಸಿ ಅರ್ಹರಿಗೆ ಮುಂಬಡ್ತಿ ನೀಡಬೇಕು ಎಂದು ಒತ್ತಾಯಿಸಿದರು.

ಕಾರ್ಮಿಕರಿಗೆ ಬಾಕಿ ಇರುವ 44 ತಿಂಗಳ ಎಚ್‌ಆರ್ ಅಲೋವೆನ್ಸ್ ಹಿಂಬಾಕಿ ಮೊತ್ತವನ್ನು ಶೀಘ್ರ ಬಿಡುಗಡೆ ಮಾಡಬೇಕು. ಜೊತೆಗೆ ಕಾರ್ಮಿಕರಿಗೆ ಅಗತ್ಯವಿರುವ ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವಂತೆ ಕಂಪನಿ ಆಡಳಿತ ಮಂಡಳಿಯನ್ನು ವಿಜಯಕುಮಾರ್ ಬಿ.ಎಚ್. ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾದಿಗ ಜಾಗೃತಿ ಯುವ ಸೇನೆಯ ಉಪಾಧ್ಯಕ್ಷ ಶರಣಬಸವ ಗಂಟ್ಲೇ, ಕಾರ್ಯದರ್ಶಿ ಬಸವರಾಜ ಟೈಲ್ರ್, ಯಲ್ಲಪ್ಪ (ಪಿಜಿ), ಅಬ್ದುಲ್ ಖಾಲೀದ್, ಗೌಸ್ ಮಿಯಾ, ಚಂದ್ರು ನೆಲೋಗಿ, ಬಸವರಾಜ ನಾಗೋಲಿ, ಹಾಜಿ ಮೇಲಿಂಗ್ ಬಾಬ, ಜಿಲಾನಿ, ಬಾಬು, ರಾಜ್ ಮಮ್ಮದ್, ಮೌಲ್ಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗಿಲ್ಲೆಸೂಗೂರಿನಲ್ಲಿ ಶ್ರೀ ಗಣೇಶ ಮೂರ್ತಿ ವಿಜೃಂಭಣೆಯ ವಿಸರ್ಜನೆ



ರಾಯಚೂರು, ಸೆ.23: ತಾಲೂಕಿನ ಗಿಲ್ಲೆಸೂಗೂರು ಗ್ರಾಮದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಶ್ರೀ ಗಣೇಶ ಮೂರ್ತಿಗೆ ಒಂಬತ್ತು ದಿನಗಳ ಕಾಲ ಪೂಜೆ-ಪುನಸ್ಕಾರಗಳನ್ನು ನೆರವೇರಿಸಿದ ಬಳಿಕ ವಿಜೃಂಭಣೆಯಿಂದ ವಿಸರ್ಜನಾ ಕಾರ್ಯಕ್ರಮ ನಡೆಸಲಾಯಿತು.

ವಿಸರ್ಜನಾ ಮಹೋತ್ಸವದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಶ್ರೀ ಮಹಾಗಣಪತಿಯ ಪ್ರಸಾದದ 5 ಕೆ.ಜಿ. ಲಡ್ಡುವನ್ನು ಕಂಠಪ್ಪ ನಾಯಕ ಅವರು ₹96,501ಕ್ಕೆ ಪಡೆದುಕೊಂಡರು. ಹಸಿ ತೆಂಗಿನಕಾಯಿ ನುಗ್ಗಲು ಹಂಪಯ್ಯ ಅವರ ಪುತ್ರ ರಮೇಶ್ ಅವರು ₹19,201ಕ್ಕೆ ಹಾಗೂ ಅಂಗವಸ್ತ್ರವನ್ನು ಮದ್ದಿಲಬಂಡ ನರಸಿಂಹ ನಾಯಕ ಅವರು ₹10,501ಕ್ಕೆ ಪಡೆದುಕೊಂಡರು.

ಗಣೇಶ ಮೂರ್ತಿಯ ವಿಸರ್ಜನಾ ಮೆರವಣಿಗೆಯ ಸಂದರ್ಭದಲ್ಲಿ ಮಳೆ ಸುರಿದರೂ ಗ್ರಾಮಸ್ಥರ ಉತ್ಸಾಹ ಕುಗ್ಗಲಿಲ್ಲ. ವರುಣನ ಆರ್ಭಟದ ನಡುವೆಯೂ ಗ್ರಾಮಸ್ಥರು, ರೈತರು, ಯುವಕರು, ಮಹಿಳೆಯರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಗಣೇಶನಿಗೆ ಭಕ್ತಿಪೂರ್ವಕವಾಗಿ ಬೀಳ್ಕೊಟ್ಟರು.

ಮಳೆಯ ನಡುವೆಯೂ ಯಾವುದೇ ಅಹಿತಕರ ಘಟನೆಗೆ ಅವಕಾಶ ನೀಡದೆ ಶಿಸ್ತು ಮತ್ತು ಶಾಂತಿಯಿಂದ ವಿಸರ್ಜನಾ ಕಾರ್ಯಕ್ರಮ ನಡೆಸಲು ಸಾರ್ವಜನಿಕರು ಸಹಕರಿಸಿದರು. ಶ್ರೀ ಗಜಾನನ ಯುವಮಂಡಲ ಸಂಘದ ನೇತೃತ್ವದಲ್ಲಿ ಬುಧವಾರ ಮುಂಜಾನೆ ತುಂಗಭದ್ರ ನದಿಯಲ್ಲಿ ಗಣೇಶ ಮೂರ್ತಿಯನ್ನು ವಿಧಿವಿಧಾನಗಳೊಂದಿಗೆ ವಿಸರ್ಜಿಸಲಾಯಿತು.

ಈ ಸಂದರ್ಭದಲ್ಲಿ ನೀಲಕಂಠ ನಾಯಕ, ನರೇಶ್ ಗೌಡ, ಶಿವರಾಜ್ ನಾಯಕ, ಮಲ್ಲೇಶ್ ನಾಯಕ, ನಲ್ಲಾರೆಡ್ಡಿ ನಾಯಕ, ಕೋಳೂರು ನರಸಿಂಹ ನಾಯಕ, ಗಿಲ್ಕ ಭೀಮೇಶ್ ನಾಯಕ, ಎನ್. ನರಸಿಂಹ ನಾಯಕ, ಜಗನ್ನಾಥ, ಮಹೇಶ್, ಭೀಮೇಶ್ ಸೇರಿದಂತೆ ಗ್ರಾಮದ ಹಿರಿಯರು, ರೈತರು, ಯುವಕರು, ಮಹಿಳೆಯರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

## ಹತ್ತಿ ಖರೀದಿಯಲ್ಲಿ ರೈತರಿಗೆ ಅನ್ಯಾಯವಾಗದಿರಲಿ: ಮರಿಲಿಂಗ ಪಾಟೀಲ್



ದೇವದುರ್ಗ: ಬಿಸಿಲು, ಮಳೆ ಲೆಕ್ಕಿಸದೆ ಹಗಲು-ರಾತ್ರಿ ಶ್ರಮಿಸಿ ಬೆಳೆದ ಹತ್ತಿಯನ್ನು ಮಾರುಕಟ್ಟೆಗೆ ತರುವ ರೈತರಿಗೆ ಖರೀದಿ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ನಷ್ಟ ಅಥವಾ ಅನ್ಯಾಯವಾಗದಂತೆ ಖರೀದಿದಾರರು ಸರ್ಕಾರ ನಿಗದಿಪಡಿಸಿರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಅಧ್ಯಕ್ಷ ಮರಿಲಿಂಗ ಪಾಟೀಲ್ ಒತ್ತಾಯಿಸಿದ್ದಾರೆ.

ಜಾಲಹಳ್ಳಿ ಭಾಗ ಹಾಗೂ ಅರಕೇರಾ ತಾಲೂಕು ವ್ಯಾಪ್ತಿಯಲ್ಲಿ ಹತ್ತಿ ಖರೀದಿಸುವ ಸಂದರ್ಭದಲ್ಲಿ ಪ್ರತಿ 1,000 ಕೆ.ಜಿ. ಹತ್ತಿಗೆ 2 ಕೆ.ಜಿ. ತೂಕ ಕಡಿತ ಮಾಡಲಾಗುತ್ತಿದೆ ಎಂಬ ದೂರುಗಳು ರೈತರಿಂದ ಕೇಳಿಬರುತ್ತಿವೆ. ಅಲ್ಲದೆ, ಗುಣಮಟ್ಟದ ನೆಪದಲ್ಲಿ ಅನಗತ್ಯವಾಗಿ ದರ ಇಳಿಕೆ ಮಾಡುವುದು ಸೇರಿದಂತೆ ರೈತರಿಗೆ ನಷ್ಟ ಉಂಟುಮಾಡುವ ಕ್ರಮಗಳು ನಡೆಯುತ್ತಿದ್ದರೆ ಸಂಬಂಧಪಟ್ಟವರು ತಕ್ಷಣವೇ ಅದಕ್ಕೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದ್ದಾರೆ.

ರೈತರು ಮಾರಾಟಕ್ಕೆ ತರುವ ಹತ್ತಿಯನ್ನು ನಿಖರವಾದ ತೂಕದಲ್ಲಿ ಖರೀದಿಸಬೇಕು. ಮಾರುಕಟ್ಟೆ ನಿಯಮಗಳಿಗೆ ಅನುಗುಣವಾಗಿ ನ್ಯಾಯಸಮ್ಮತ ಬೆಲೆ ನೀಡುವುದರ ಜೊತೆಗೆ ಪ್ರತಿಯೊಂದು ವ್ಯವಹಾರಕ್ಕೂ ಸರಿಯಾದ ರಸೀದಿ ನೀಡಬೇಕು. ಖರೀದಿ ಕೇಂದ್ರಗಳಲ್ಲಿ ಯಾವುದೇ ರೀತಿಯ ಅಕ್ರಮ ಅಥವಾ ತೂಕದಲ್ಲಿ ವ್ಯತ್ಯಾಸ ನಡೆಯದಂತೆ ಅಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸಬೇಕು ಎಂದು ಮನವಿ ಮಾಡಿದ್ದಾರೆ.

ಹತ್ತಿ ಖರೀದಿ ಪ್ರಕ್ರಿಯೆಯಲ್ಲಿ ನಿಯಮ ಉಲ್ಲಂಘನೆ ಕಂಡುಬಂದರೆ ಸಂಬಂಧಪಟ್ಟ ವ್ಯಾಪಾರಿಗಳು ಅಥವಾ ಖರೀದಿದಾರರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು. ರೈತರು ಬೆಳೆದ ಬೆಳೆಗೆ ನ್ಯಾಯಯುತ ಬೆಲೆ ಸಿಗುವಂತೆ ಆಡಳಿತವೂ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು ಎಂದು ಅವರು ಹೇಳಿದ್ದಾರೆ.

ರೈತರ ಪರಿಶ್ರಮವೇ ಕೃಷಿ ಆರ್ಥಿಕತೆಯ ಆಧಾರವಾಗಿದೆ. ರೈತನ ಶ್ರಮವನ್ನು ಗೌರವಿಸುವ ರೀತಿಯಲ್ಲಿ ವ್ಯಾಪಾರ ನಡೆಯಬೇಕೇ ಹೊರತು, ಅವರ ಅಸಹಾಯಕತೆಯನ್ನು ದುರುಪಯೋಗಪಡಿಸಿಕೊಳ್ಳಬಾರದು. ರೈತರಿಗೆ ಅನ್ಯಾಯವಾದರೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸುಮ್ಮನಿರುವುದಿಲ್ಲ. ರೈತರ ಹಕ್ಕು ಮತ್ತು ನ್ಯಾಯದ ಪರವಾಗಿ ಸಂಘಟನೆ ನಿರಂತರವಾಗಿ ಹೋರಾಟ ನಡೆಸಲಿದೆ ಎಂದು ಮರಿಲಿಂಗ ಪಾಟೀಲ್ ತಿಳಿಸಿದ್ದಾರೆ.

## ರೈಲ್ವೆ ಸಿಬ್ಬಂದಿ ಸಮಸ್ಯೆಗಳ ಪರಿಹಾರಕ್ಕೆ SCRMU ಮನವಿ




ರಾಯಚೂರು, ಸೆ.22: ರಾಯಚೂರು ರೈಲ್ವೆ ನಿಲ್ದಾಣಕ್ಕೆ ಮಂಗಳವಾರ ಭೇಟಿ ನೀಡಿದ ದಕ್ಷಿಣ ಮಧ್ಯ ರೈಲ್ವೆಯ ಹಿರಿಯ ಅಧಿಕಾರಿಗಳಾದ ಡಿ. ಅಂಜನೇಯಲು ರೆಡ್ಡಿ, PCE/SCR ಹಾಗೂ ವರುಣ್ ಬಾಬು, Sr.DEN/Co-ord/SC ಅವರು ನಿಲ್ದಾಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪರಿಶೀಲನೆ ನಡೆಸಿದರು.

ಈ ವೇಳೆ ದಕ್ಷಿಣ ಮಧ್ಯ ರೈಲ್ವೆ ಮಜ್ದೂರ್ ಯೂನಿಯನ್ (SCRMU) ರಾಯಚೂರು ಶಾಖೆಯ ಪದಾಧಿಕಾರಿಗಳು ರೈಲ್ವೆ ಸಿಬ್ಬಂದಿ ಎದುರಿಸುತ್ತಿರುವ ವಿವಿಧ ಸಮಸ್ಯೆಗಳು ಹಾಗೂ ಕುಂದುಕೊರತೆಗಳ ಕುರಿತು ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ರೈಲ್ವೆ ಸಿಬ್ಬಂದಿ ವಾಸಿಸುವ ಕ್ವಾರ್ಟರ್ಸ್ ಪ್ರದೇಶಗಳಲ್ಲಿ ಸಮರ್ಪಕ ಮೂಲಸೌಕರ್ಯಗಳ ಕೊರತೆ, ರಸ್ತೆ ಹಾಗೂ ಚರಂಡಿ ಸಮಸ್ಯೆ, ಹಳೆಯ ರೈಲ್ವೆ ಕ್ವಾರ್ಟರ್ಸ್‌ಗಳ ದುರಸ್ತಿ ಮತ್ತು ನಿರ್ವಹಣೆ ಸೇರಿದಂತೆ ಹಲವು ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತರಲಾಯಿತು. ಸಿಬ್ಬಂದಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಜೊತೆಗೆ ದೀರ್ಘಕಾಲದಿಂದ ಬಾಕಿ ಉಳಿದಿರುವ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಲ್ಪಿಸಬೇಕು ಎಂದು ಯೂನಿಯನ್ ಪದಾಧಿಕಾರಿಗಳು ಒತ್ತಾಯಿಸಿದರು.

ಸಿಬ್ಬಂದಿ ವಸತಿ ಪ್ರದೇಶಗಳ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಶೀಲಿಸಿ, ಅಗತ್ಯ ದುರಸ್ತಿ ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸಂಬಂಧಿಸಿದ ವಿಭಾಗಗಳಿಗೆ ಸೂಚನೆ ನೀಡಬೇಕು ಎಂದು ಮನವಿಯಲ್ಲಿ ಕೋರಲಾಯಿತು.

ಈ ಸಂದರ್ಭದಲ್ಲಿ ರಾಯಚೂರು ಶಾಖೆಯ ಕಾರ್ಯದರ್ಶಿ ಜಂಬಣ್ಣ, ಅಧ್ಯಕ್ಷ ಅರುಣ್ ಕುಮಾರ್ ಹಾಗೂ ಖಜಾಂಚಿ ಚನ್ನ ವೀರಣ್ಣ ಅವರು ರೈಲ್ವೆ ಸಿಬ್ಬಂದಿಯ ಸಮಸ್ಯೆಗಳ ಕುರಿತ ಮನವಿಯನ್ನು PCE/SCR ಡಿ. ಅಂಜನೇಯಲು ರೆಡ್ಡಿ ಅವರಿಗೆ ಹಸ್ತಾಂತರಿಸಿದರು.

ಕಾರ್ಯಕ್ರಮದಲ್ಲಿ ರಾಯಚೂರು SCRMU ಶಾಖೆಯ ಪದಾಧಿಕಾರಿಗಳು, ಸದಸ್ಯರು ಹಾಗೂ ರೈಲ್ವೆ ಸಿಬ್ಬಂದಿ ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಾಸಿಕ ಗೌರವಧನಕ್ಕೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 23 (ಕರ್ನಾಟಕ ವಾರ್ತೆ): ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿಗೆ ಜೈನ ಅರ್ಚಕರು, ಬೌದ್ಧ ದಮ್ಮಾಚಾರಿಗಳು ಮತ್ತು ಸಿಖ್ ಗ್ರಂಥಿಗಳಿಗೆ ಮಾಸಿಕ ಗೌರವಧನ ನೀಡಲು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹತೆಗಳು: ನೋಂದಾಯಿತ ಬಸದಿಗಳು, ವಿಹಾರಗಳು ಗುರುದ್ವಾರಗಳ ಅರ್ಚಕರು, ದಮ್ಮಾಚಾರಿಗಳು ಮತ್ತು ಗ್ರಂಥಿಗಳನ್ನುಆಯಾ ಸಂಸ್ಥೆಯ ಆಡಳಿತ ಮಂಡಳಿಯು ಆಯ್ಕೆ ಮಾಡಿರಬೇಕು. ಅರ್ಚಕರು, ದಮ್ಮಾಚಾರಿಗಳು ಮತ್ತು ಗ್ರಂಥಿಗಳು ಕ್ರಮವಾಗಿ ಜೈನ್, ಬೌದ್ಧ ಮತ್ತು ಸಿಖ್ ಧರ್ಮಕ್ಕೆ ಸೇರಿದವರಾಗಿರಬೇಕು. ಅರ್ಚಕರು, ದಮ್ಮಾಚಾರಿಗಳು ಮತ್ತು ಗ್ರಂಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.

ಕನಿಷ್ಠ 18 ವರ್ಷ ವಯಸ್ಸಿನವರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯವು ಎಲ್ಲಾ ಮೂಲಗಳಿಂದ ರೂ.5.00 ಲಕ್ಷಗಳನ್ನು ಮೀರಬಾರದು. ಈ ಯೋಜನೆಯ ಪ್ರಯೋಜನಗಳನ್ನು ಪಡೆಯಲು ಅರ್ಚಕರು, ದಮ್ಮಾಚಾರಿಗಳು ಮತ್ತು ಗ್ರಂಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಆಗಿರುವ ಬಗ್ಗೆ ಹಾಗೂ ಓಟಿಪಿಗೆ ಲಿಂಕ್ ಆಗಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಈ ಯೋಜನೆಯ ಅರ್ಹತಾ ಷರತ್ತುಗಳು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶಗಳು ಹಾಗೂ ಮಾರ್ಗಸೂಚಿಗಳಿಗೆ ಒಳಪಟ್ಟಿರುತ್ತದೆ.

ಜಿಲ್ಲೆಯಲ್ಲಿನ ಅರ್ಹ ಜೈನ ಅರ್ಚಕರು, ಬೌದ್ಧ ದಮ್ಮಾಚಾರಿಗಳು ಮತ್ತು ಸಿಖ್ ಗ್ರಂಥಿಗಳು ಸೇವಾ ಸಿಂಧು ಪೋರ್ಟಲ್ ಣಣಠಿ://ಚಿಟಿ.ಇಚಿಡಿಟಿಚಿಣಚಿಞಚಿ..ಟಿ/ಡಿಥಿ ಈ ಲಿಂಕ್ ಅನ್ನು ಬಳಸಿಕೊಂಡು ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಮತ್ತು ಈ ಸಂಬಧ ಆಸಕ್ತ ಅರ್ಚಕರು, ದಮ್ಮಾಚಾರಿಗಳು ಮತ್ತು ಗ್ರಂಥಿಗಳು ತಮ್ಮ ಭೌತಿಕ (ಲಿಖಿತ) ಅರ್ಜಿಗಳನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಚೇರಿಗೆ ಸಲ್ಲಿಸಬಹುದಾಗಿದೆ.

ಸೂಚನೆ: ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಚೇರಿಗೆ ಹಾಗೂ ತಾಲ್ಲೂಕಿನ ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ಸ್ವಾಮಿರಾವ್ ಕುಲಕರ್ಣಿಗೆ ಸಿರಿ ಗೋವಿಂದ ವಿಠ್ಠಲ ಪ್ರಶಸ್ತಿ



ರಾಯಚೂರು: ನಗರದ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಅ.3 ಮತ್ತು 4ರಂದು ಶನಿವಾರ ಹಾಗೂ ಭಾನುವಾರ ಹಮ್ಮಿಕೊಳ್ಳಲಾಗಿರುವ ಶ್ರೀ ಅಸ್ಕಿಹಾಳ ಗೋವಿಂದ ದಾಸರ ಸ್ಮರಣೋತ್ಸವದ ಗೋವಿಂದಗಾನ ಕಾರ್ಯಕ್ರಮದಲ್ಲಿ ದಾಸ ಸಾಹಿತ್ಯ ಚಿಂತಕ, ವಾಗ್ಮಿ ಹಾಗೂ ಕನಕಶ್ರೀ ಪ್ರಶಸ್ತಿ ಪುರಸ್ಕೃತ ಡಾ. ಸ್ವಾಮಿರಾವ್ ಕುಲಕರ್ಣಿ ಕಲಬುರಗಿ ಅವರಿಗೆ ಸಿರಿ ಗೋವಿಂದ ವಿಠ್ಠಲ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಕಾರ್ಯಕ್ರಮದ ಆಯೋಜಕ ಹಾಗೂ ಖ್ಯಾತ ಗಾಯಕ ಡಾ. ರಾಯಚೂರು ಶೇಷಗಿರಿ ದಾಸ್ ತಿಳಿಸಿದ್ದಾರೆ.

ದಾಸ ಸಾಹಿತ್ಯ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿರುವ ಡಾ. ಸ್ವಾಮಿರಾವ್ ಕುಲಕರ್ಣಿ ಅವರು ಇದುವರೆಗೆ 71 ಕೃತಿಗಳನ್ನು ರಚಿಸಿದ್ದಾರೆ. ವಿಶೇಷವಾಗಿ ಲಿಂಗದಹಳ್ಳಿಯ ರಾಮದಾಸರ ಕೀರ್ತನೆಗಳು, ಬದುಕು, ಸಾಹಿತ್ಯ ಹಾಗೂ ಸಮಗ್ರ ಕೀರ್ತನೆಗಳನ್ನು ಒಳಗೊಂಡ ಅವರ ಕೃತಿಗಳು ದಾಸ ಸಾಹಿತ್ಯ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿವೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ. ಸ್ವಾಮಿರಾವ್ ಕುಲಕರ್ಣಿ ಅವರ ಸಾಹಿತ್ಯ ಮತ್ತು ದಾಸ ಪರಂಪರೆಯ ಸೇವೆಯನ್ನು ಗುರುತಿಸಿ ಕರ್ನಾಟಕ ಸರ್ಕಾರದ ಕನಕಶ್ರೀ ಪ್ರಶಸ್ತಿ, ಮಂತ್ರಾಲಯ ಮಠದ ವಿಜಯೇಂದ್ರ ಪ್ರಶಸ್ತಿ, ಟಿಟಿಡಿಯ ಪುರಂದರ ದಾಸಾನುಗ್ರಹ ಪ್ರಶಸ್ತಿ, ಜಗನ್ನಾಥ ವಿಠ್ಠಲ ಪ್ರಶಸ್ತಿ, ಸದ್ಭಾವನಾ ಪ್ರಶಸ್ತಿ, ದಾಸ ಸಿರಿ ಪ್ರಶಸ್ತಿ, ಜ್ಞಾನ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳು ಲಭಿಸಿವೆ.

ಅ.3ರಂದು ನಡೆಯುವ ಗೋವಿಂದಗಾನ ಕಾರ್ಯಕ್ರಮದಲ್ಲಿ ಡಾ. ಸ್ವಾಮಿರಾವ್ ಕುಲಕರ್ಣಿ ಅವರಿಗೆ ಸಿರಿ ಗೋವಿಂದ ವಿಠ್ಠಲ ಪ್ರಶಸ್ತಿ ಫಲಕ ಹಾಗೂ ಧನ ಪುರಸ್ಕಾರದೊಂದಿಗೆ ಸನ್ಮಾನಿಸಿ ಗೌರವಿಸಲಾಗುವುದು ಎಂದು ಡಾ. ರಾಯಚೂರು ಶೇಷಗಿರಿ ದಾಸ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K